ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 66 RNI Number : KNKAN/25/A2770 13-03-2026 Friday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :66 ರಾಯಚೂರು 13-03-2026 ಶುಕ್ರವಾರ ಪುಟ 04 ಬೆಲೆ ರೂ.2/- ಮೊ:8660146563

ಪಡಿತರ ಕಾರ್ಡ್ ಆದಾಯ ಮಿತಿ 3 ಲಕ್ಷ ರೂ.ಗೆ ಏರಿಸಲು ಸಮಿತಿ ಶಿಫಾರಸು: ಸಚಿವ ದಿನೇಶ್ ಗುಂಡೂರಾವ್

ಬೆಂಗಳೂರು: ಪಡಿತರ ಕಾರ್ಡ್ ಆದಾಯ ಮಿತಿಯನ್ನು ಪರಿಷ್ಕರಿಸುವ ಅಗತ್ಯ ಇದ್ದು, ಈ ಬಗ್ಗೆ ಆಹಾರ ಇಲಾಖೆ ಗಮನ ಹರಿಸಲಿದೆ ಎಂದು ಸಚಿವ ದಿನೇಶ್ ಗುಂಡೂರಾವ್ ತಿಳಿಸಿದರು.

ಪ್ರಶ್ನೋತ್ತರ ಅವಧಿ ವೇಳೆ ಬಿಜೆಪಿ ಸದಸ್ಯ ಅಶ್ವತ್ಥ್ ನಾರಾಯಣ್ ಅವರು ಆದಾಯ ಮಿತಿ ಪರಿಷ್ಕರಿಸುವ ಬಗ್ಗೆ ಒತ್ತಾಯಿಸಿದರು. 'ರಾಜ್ಯದಲ್ಲಿ ಬಿಪಿಎಲ್ ಕಾರ್ಡ್ ಆದಾಯ ಮಿತಿ ನಿಗದಿ ಮಾಡಲಾಗಿದೆ. ಬೆಂಗಳೂರಲ್ಲಿ ನಿಗದಿ ಮಾಡಿದ ಆದಾಯ ಮಿತಿ ಕಡಿಮೆ ಇದೆ. ಬೆಂಗಳೂರಲ್ಲಿ ಜೀವನ ವೆಚ್ಚ ಹೆಚ್ಚಾಗಿದೆ. ಎಲ್ಲವೂ ದುಬಾರಿಯಾಗಿದೆ. ಎಲ್ಲ ಸೇವೆಗೂ ಇಲ್ಲಿ ಹಣ ಕೊಡಬೇಕು. ಚಾಲಕರಿಗೂ, ಆಟೋ ಚಾಲಕರಿಗೂ ಇಂದು ಬಿಪಿಎಲ್ ಕಾರ್ಡ್ ಇಲ್ಲ. ನಗರದಲ್ಲಿ 50% ಜನರಿಗೆ ಆದ್ಯತಾ ಕಾರ್ಡ್ ಅಥವಾ ಅಂತ್ಯೋದಯ ಕಾರ್ಡ್ ಕೊಡಬೇಕು ಎಂಬುದು ಆಹಾರ ಭದ್ರತಾ ಕಾಯ್ದೆಯಲ್ಲಿದೆ. ನಗರದ ಬಡ ಜನರು ಆದ್ಯತಾ ಕಾರ್ಡ್‌ನಿಂದ ವಂಚಿತರಾಗಿದ್ದಾರೆ. ಆಹಾರ ಭದ್ರತಾ ಕಾಯ್ದೆ ಅನುಸಾರ ನಗರ ಪ್ರದೇಶದಲ್ಲಿ ಶೇ.50ರಷ್ಟು, ಗ್ರಾಮೀಣ ಭಾಗದಲ್ಲಿ ಶೇ.75ರಷ್ಟು ಜನರಿಗೆ ಆದ್ಯತಾ ಪಡಿತರ ಚೀಟಿ ನೀಡಬೇಕು. ಆದರೆ, ಸರ್ಕಾರ ಇದನ್ನು ಪಾಲಿಸುತ್ತಿಲ್ಲ. ಅಂಗವಿಕಲರು, ವಿಧವೆಯರು, ವಯೋವೃದ್ದರಿಗೆ, ವೃತ್ತಿ ಆಧಾರಿತವಾಗಿ ಆದ್ಯತಾ ಪಡಿತರ ಚೀಟಿ ನೀಡಬೇಕು. ಸರ್ಕಾರ ಇದ್ಯಾವುದನ್ನು ಪಾಲಿಸಿಲ್ಲ' ಎಂದು ಅಶ್ವತ್ಥ್ ನಾರಾಯಣ್ ಆರೋಪಿಸಿದರು.

ಆದಾಯ ಮೀತಿ 3 ಲಕ್ಷ ರೂಗೆ ಏರಿಸಲು ಶಿಫಾರಸು: ಆಹಾರ ಸಚಿವರ ಪರವಾಗಿ ಉತ್ತರಿಸಿದ ಸಚಿವ ದಿನೇಶ್ ಗುಂಡೂರಾವ್, ಆದಾಯ ಮಿತಿ 2017 ರಿಂದ 1.20 ಲಕ್ಷ ರೂ. ನಿಗದಿ ಮಾಡಲಾಗಿದೆ. ಆ ಮಿತಿ ಕಡಿಮೆ ಇದೆ. 9



ವರ್ಷಗಳಿಂದ ಆದಾಯ ಮಿತಿ ಪರಿಷ್ಕರಣೆ ಮಾಡಿಲ್ಲ. ಆದಾಯ ಮಿತಿ ಪರಿಷ್ಕರಣೆ ಮಾಡುವ ಅಗತ್ಯ ಇದೆ. ಅದರ ಪುನರ್ ಪರಿಶೀಲನೆ ಆಗಬೇಕು. ಆರ್.ವಿ.ದೇಶಪಾಂಡೆ ಅಧ್ಯಕ್ಷತೆಯ ಆಡಳಿತಾ ಸುಧಾರಣಾ ಆಯೋಗದವರು ಆದಾಯ ಮಿತಿಯನ್ನು 3 ಲಕ್ಷ ರೂ.ಗೆ ಕೊಂಡೊಯ್ಯುವಂತೆ ಶಿಫಾರಸು ಮಾಡಿದ್ದಾರೆ. ಈ ಬಗ್ಗೆ ಆಹಾರ ಇಲಾಖೆ ಆದಾಯ ಮಿತಿಯನ್ನು ಯಾವ ರೀತಿ ಪರಿಷ್ಕರಣೆ ಮಾಡಬೇಕು, ಎಷ್ಟು ಮಾಡಬೇಕು ಎಂಬ ಬಗ್ಗೆ ಗಮನ ಕೊಡಲಿದೆ. ಆದಾಯ ಮಿತಿ ಹೆಚ್ಚಿಸುವ ಅಗತ್ಯವೂ ಇದೆ ಎಂದು ತಿಳಿಸಿದರು.

ಬಿಪಿಎಲ್ ಕಾರ್ಡ್ ಎಲ್ಲದಕ್ಕೂ ಮಾನದಂಡ ಆಗಿ ಹೋಗಿದೆ. ನಗರ ಪ್ರದೇಶದಲ್ಲಿ ಬಿಪಿಎಲ್ ಕಾರ್ಡ್ ಶೇ 50ಕ್ಕಿಂತ ಸ್ವಲ್ಪ ಕಡಿಮೆ ಇದೆ. ಕೇಂದ್ರ ಸರ್ಕಾರ ರಾಜ್ಯದಲ್ಲಿ 1.09 ಕೋಟಿ ಕುಟುಂಬಕ್ಕೆ ಪಡಿತರ ಕಾರ್ಡ್ ಕೊಡಬೇಕು ಎಂದಿದೆ. ಆದರೆ, ನಾವು ರಾಜ್ಯದಲ್ಲಿ 15 ಲಕ್ಷ ಕಾರ್ಡ್ ಹೆಚ್ಚಿಗೆ ಕೊಟ್ಟಿದ್ದೇವೆ. ಕೆಲವು ಗ್ರಾಮೀಣ ಪ್ರದೇಶದಲ್ಲಿ 90% ಬಿಪಿಎಲ್ ಕಾರ್ಡ್ ಕೊಟ್ಟಿದ್ದೇವೆ. 1.24 ಕೋಟಿ ಜನಕ್ಕೆ ಬಿಪಿಎಲ್ ಕಾರ್ಡ್ ಕೊಡ್ತಾ ಇದ್ದೇವೆ. ಕೆಲವು ಕಡೆ ದುರುಪಯೋಗವೂ ಆಗುತ್ತಿದೆ. ಹೀಗಾಗಿ ಇದಕ್ಕೂ ಕಡಿತ ಹಾಕಬೇಕಾಗಿದೆ ಎಂದರು.

ರಾಜ್ಯದಲ್ಲಿ ಅನರ್ಹ ಆದ್ಯತಾ ಪಡಿತರ ಚೀಟಿದಾರರನ್ನು (ಬಿಪಿಎಲ್, ಅಂತ್ಯೋದಯ) ಗುರುತಿಸುವ ನೆಪದಲ್ಲಿ ಅರ್ಹ ಕುಟುಂಬಗಳ ಬಿಪಿಎಲ್ ಕಾರ್ಡುಗಳನ್ನೂ ಎಪಿಎಲ್‌ಗೆ ಪರಿರ್ತಿಸಿ ಲಕ್ಷಾಂತರ ಕುಟುಂಬಗಳನ್ನು ಬೀದಿಗೆಳೆಯಲಾಗಿದೆ ಎಂದು ಪ್ರತಿಪಕ್ಷ ಮಾತ್ರವಲ್ಲದೇ ಕೆಲ ಆಡಳಿತ ಪಕ್ಷದ ಸದಸ್ಯರೂ ಸರ್ಕಾರದ ವಿರುದ್ಧ ಅಸಮಾಧಾನ, ಆಕ್ರೋಶ ವ್ಯಕ್ತಪಡಿಸಿದರು.

ಆಡಳಿತ ಮತ್ತು ಪ್ರತಿಪಕ್ಷ ಸದಸ್ಯರು ಸೆಕ್ಯುರಿಟಿ ಗಾರ್ಡ್, ಕ್ಯಾಬ್ ಡ್ರೈವರ್ ಸೇರಿದಂತೆ ಕಡುಬಡವರ ಬಿಪಿಎಲ್ ಕಾರ್ಡ್‌ಗಳನ್ನು ಎಪಿಎಲ್ ಆಗಿ ಪರಿವರ್ತಿಸಲಾಗಿದೆ. ಪ್ರತಿ ಪಕ್ಷೇತ್ರದಲ್ಲೂ 5 ರಿಂದ 6 ಸಾವಿರ ಕಾರ್ಡುಗಳನ್ನು ಪರಿವರ್ತಿಸಲಾಗಿದೆ. ಆದಾಯ ತೆರಿಗೆ ವ್ಯಾಪ್ತಿಗೆ ಬರದಿದ್ದರೂ ಐಟಿ ರಿಟರ್ನ್ ಸಲ್ಲಿಸಿರುವವರ ಕಾರ್ಡುಗಳನ್ನೂ ಎಪಿಎಲ್ ಮಾಡಲಾಗಿದೆ. ಪರಿಶೀಲನೆ ನಡೆಸದೇ ಬೇಕಾಬಿಟ್ಟಿಯಾಗಿ ಪರಿವರ್ತನೆ ಮಾಡಿರುವುದರಿಂದ ಅರ್ಹತೆ ಇದ್ದರೂ ಆದ್ಯತಾ ಪಡಿತರ ಚೀಟಿ ಕಳೆದುಕೊಂಡು ಲಕ್ಷಾಂತರ ಕುಟುಂಬಗಳು ಸರ್ಕಾರದ ಸೌಲಭ್ಯಗಳಿಂದ ವಂಚಿತರಾಗುತ್ತಿದ್ದಾರೆ ಎಂದು ಕಿಡಿ ಕಾರಿದರು.

ಎಪಿಎಲ್‌ಗೆ ಪರಿವರ್ತಿಸಿರುವ ಕಾರ್ಡುಗಳನ್ನು ಕೂಡಲೇ ಬಿಪಿಎಲ್‌ಗೆ ಮರು ಪರಿವರ್ತಿಸಿ ಬಡ ಕುಟುಂಬಗಳಿಗೆ ನ್ಯಾಯ ಒದಗಿಸಬೇಕು. ಸರ್ಕಾರ ಬೇಕಿದ್ದರೆ ಪ್ರತಿ ಕುಟುಂಬದ ಪರಿಶೀಲನೆ ನಡೆಸಿ ನಂತರ ಪರಿವರ್ತನೆ ಮಾಡಲಿ ಎಂದು ಆಗ್ರಹಿಸಿದರು.

ಶಿವನಗೌಡ ನಾಯಕ ವಿರುದ್ದ ದೂರು : ಕ್ರಮ ಕೈಗೊಳ್ಳದಿದ್ದರೆ ಉಗ್ರ ಹೋರಾಟದ ಎಚ್ಚರಿಕೆ

ರಾಯಚೂರು,ಮಾ.12-

ಸಮಾಜ ಕಲ್ಯಾಣ ಸಚಿವ . . ಮಹದೇವಪ್ಪ ಅವರ ವಿರುದ್ಧ ಅವಹೇಳನಕಾರಿ ಹಾಗೂ ಪ್ರಚೋದನಾತ್ಮಕ ಹೇಳಿಕೆ ನೀಡಿದ ಆರೋಪದ ಹಿನ್ನೆಲೆಯಲ್ಲಿ ದೇವದುರ್ಗದ ಮಾಜಿ ಶಾಸಕ ಹಾಗೂ ಮಾಜಿ ಸಚಿವ . ಶಿವನ ಗೌಡ ನಾಯಕ ವಿರುದ್ಧ ತಕ್ಷಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಛಲವಾದಿ ಮಹಾಸಭಾ ಜಿಲ್ಲಾಧ್ಯಕ್ಷ ವಿಶ್ವನಾಥ್ ಪಟ್ಟಿ ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚಿತ್ರದುರ್ಗದಲ್ಲಿ ನಡೆದ



ಎಸ್‌ಸಿ ಎಸ್‌ಟಿ ಜನಾಂದೋಲನ ಸಭೆಯಲ್ಲಿ ಶಿವನಗೌಡ ನಾಯಕ ಅವರು ಸಚಿವ ಮಹಾದೇವಪ್ಪ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿದ್ದು, ''ಎದುರು ಸಿಕ್ಕರೆ ಕಪಾಳಕ್ಕೆ ಹೊಡೆಯುತ್ತೇನೆ'' ಎಂಬ ಹೇಳಿಕೆ ನೀಡಿರುವ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ ಎಂದು ಆರೋಪಿಸಿದರು.

ಈ ರೀತಿಯ ಹೇಳಿಕೆಗಳು ಸಾರ್ವ ಜನಿಕರನ್ನು ಪ್ರಚೋದಿಸುವಂತಿದ್ದು, ಸಮಾಜದಲ್ಲಿ ದ್ವೇಷ ಮತ್ತು ಅಶಾಂತಿ ಹುಟ್ಟಿಸುವ ಸಾಧ್ಯತೆ ಇದೆ ಎಂದು ಹೇಳಿದರು. ಸಾರ್ವಜನಿಕರನ್ನು ಸಚಿವರ ವಿರುದ್ಧ ಪ್ರಚೋದಿಸುವ ಮೂಲಕ ವಿವಿಧ ಸಮುದಾಯಗಳ ನಡುವೆ ವೈಮನಸ್ಸು ಉಂಟುಮಾಡುವ ಪ್ರಯತ್ನ ನಡೆದಿದೆ ಎಂದು ದೂರಿದರು.

ಈ ಸಂಬಂಧ ಮಾರ್ಚ್ 10ರಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗೆ ದೂರು ಸಲ್ಲಿಸಲಾಗಿದ್ದು, ಅವರ ಸೂಚನೆಯಂತೆ ರಾಯಚೂರು ಪಶ್ಚಿಮ ಪೊಲೀಸ್ ಠಾಣೆಯಲ್ಲಿ ಅಧಿಕೃತವಾಗಿ ದೂರು ದಾಖಲಿಸಲಾಗಿದೆ ಎಂದು ತಿಳಿಸಿದರು.

ಸಚಿವ ಮಹಾದೇವಪ್ಪ ಅವರು ಹಲವು ಬಾರಿ ಶಾಸಕರಾಗಿ ಮತ್ತು ಸಚಿವರಾಗಿ ಸೇವೆ ಸಲ್ಲಿಸಿರುವ ಹಿರಿಯ ರಾಜಕೀಯ ನಾಯಕರು. ಅವರ ವಿರುದ್ಧ ವೈಯಕ್ತಿಕ ರಾಜಕೀಯ ದ್ವೇಷದಿಂದ ಮಾತನಾಡಿರುವುದು ಸಮಾಜಕ್ಕೆ ನೋವುಂಟು ಮಾಡಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಶಿವನಗೌಡ ನಾಯಕ ವಿರುದ್ಧ ತಕ್ಷಣ ಪ್ರಕರಣ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಬೇಕು. ಇಲ್ಲವಾದರೆ

ಮೂರನೇಯ ಪುಟಕ್ಕೆ

ಸರಕಾರಿ ಶಾಲೆ ಉಳಿಸುವಂತೆ ಎಐಡಿಎಸ್‌ಒ ಅಭಿಯಾನ, ಪೋಸ್ಟರ್ ಬಿಡುಗಡೆ



ರಾಯಚೂರು: ಸರ್ಕಾರಿ ಶಾಲೆಗಳನ್ನು ಉಳಿಸಲು ನಡೆಯುತ್ತಿರುವ ಕಲ್ಯಾಣ ಕರ್ನಾಟಕ ವಲಯ ಮಟ್ಟದ ಸಮಾವೇಶದ ಭಾಗವಾಗಿ ಪೋಸ್ಟರ್ ಅನ್ನು ರಾಯಚೂರು ನಗರದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ರಾಯಚೂರಿನಲ್ಲಿ ಅಖಿಲ ಭಾರತ ಪ್ರಜಾಸತ್ತಾತ್ಮಕ ವಿದ್ಯಾರ್ಥಿ ಸಂಘಟನೆ (ಎಐಡಿಎಸ್‌ಒ) ವಿದ್ಯಾರ್ಥಿ ಸಂಘಟನೆಯ ಪದಾಧಿಕಾರಿಗಳು ಗುರುವಾರ ಬಿಡುಗಡೆ ಮಾಡಿದರು.

ಈ ವೇಳೆ ಮಾತನಾಡಿದ ಸಂಘಟನೆಯ ಮುಖಂಡರು, ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗಾಗಿ ಮೀಸಲಾಗಿರುವ ಕೆಕೆಆರ್‌ಡಿಬಿ ನಿಧಿಯನ್ನು ಸರ್ಕಾರಿ ಶಾಲೆಗಳನ್ನು ಮುಚ್ಚಲು ಬಳಸುತ್ತಿರುವುದು ರಾಜ್ಯ ಸರ್ಕಾರ ಈ ಭಾಗದ ಜನರಿಗೆ ಮಾಡುತ್ತಿರುವ ದೊಡ್ಡ ದ್ರೋಹ ಎಂದು ಆರೋಪಿಸಿದರು.

ಕರ್ನಾಟಕದಾದ್ಯಂತ ಜನರ ತೀವ್ರ ವಿರೋಧದ ನಡುವೆಯೂ ಈ ಬಾರಿ ಬಜೆಟ್‌ನಲ್ಲಿ ಮುಖ್ಯಮಂತ್ರಿಗಳು ಕೆಪಿಎಸ್ ಶಾಲೆಗಳ ಸ್ಥಾಪನೆ ಕುರಿತು

ಮೂರನೇಯ ಪುಟಕ್ಕೆ

ತುಂಗಭದ್ರಾ ನೀರಾವರಿ ಕಾರ್ಮಿಕರಿಗೆ 43.78 ಲಕ್ಷ ರೂ. ವೇತನ ಪಾವತಿಗೆ ಆದೇಶ : ನಾಗಲಿಂಗಸ್ವಾಮಿ

ರಾಯಚೂರು,ಮಾ.12-

ತುಂಗಭದ್ರಾ ನೀರಾವರಿ ಯೋಜನೆಯಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರಿಗೆ ಬಾಕಿ ಉಳಿದಿದ್ದ 43,78,387 ರೂ. ವೇತನವನ್ನು ಪಾವತಿಸಲು ಕಲಬುರಗಿ ಪ್ರಾದೇಶಿಕ ಉಪ ಕಾರ್ಮಿಕ ಆಯುಕ್ತರು ಆದೇಶ ಹೊರಡಿಸಿದ್ದಾರೆ. ಇದು ಕಾರ್ಮಿಕರ ಹೋರಾಟದ ಜಯವಾಗಿದೆ ಎಂದು ತುಂಗಭದ್ರಾ ನೀರಾವರಿ ಕಾರ್ಮಿಕರ ಸಂಘದ ಅಧ್ಯಕ್ಷ ಕೆ.ನಾಗಲಿಂಗಸ್ವಾಮಿ ತಿಳಿಸಿದ್ದಾರೆ.

ಗುರುವಾರ ರಾಯಚೂರಿಲ್ಲಿ ನಡೆದ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ ನೀರವಾರಿ ನಿಗಮ ಲಿಮಿಟೆಡ್ ನ ಯರಮರಸ್, ಗಿಲ್ಲೆಸುಗೂರು



ಹಾಗೂ ಸಿರವಾರ ವಿಭಾಗದ ಹಿರೇ ಕೊಟ್ನೆಕಲ್ ಉಪ ವಿಭಾಗಗಳಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರಿಗೆ ವೇತನವನ್ನು ಪಾವತಿಸದೆ ವಿಳಂಬ ಮಾಡಲಾಗಿತ್ತು ಎಂದು ಆರೋಪಿಸಿದರು.


ಈ ಕುರಿತು ತುಂಗಭದ್ರಾ ನೀರಾವರಿ ಕಾರ್ಮಿಕರ ಸಂಘವು ಕಾರ್ಮಿಕ ಇಲಾಖೆಗೆ ಅಧಿಕೃತವಾಗಿ ದೂರು ಸಲ್ಲಿಸಿತ್ತು. ದೂರಿನ ಆಧಾರದ ಮೇಲೆ ವಿಚಾರಣೆ ನಡೆಸಿದ ಉಪ ಕಾರ್ಮಿಕ ಆಯುಕ್ತರು ವೇತನ ಪಾವತಿ ಕಾಯ್ದೆ 1936 ಅಡಿಯಲ್ಲಿ ಕಾರ್ಮಿಕರಿಗೆ ಬಾಕಿ ವೇತನದ ಜೊತೆಗೆ ಪರಿಹಾರ ಸಹಿತ ಪಾವತಿಸಲು ಆದೇಶ ನೀಡಿದ್ದಾರೆ ಎಂದು ಅವರು ವಿವರಿಸಿದರು.

ಸಂಘದ ಪ್ರಧಾನ ಕಾರ್ಯದರ್ಶಿ ಎಂ. ಬಸವರಾಜ, ಎಐಸಿಸಿಟಿಯು ಜಿಲ್ಲಾ ಘಟಕದ ಅಧ್ಯಕ್ಷ ಅಜೀಜ್ ಜಾಗೀದಾರ ಸಿದ್ದಪ್ಪ ಗೌಡ, ರಾಜಾಸಾಬ್, ಲಕ್ಷ್ಮಣ, ಭೀಮಣ್ಣ ಉಡುಮಗಲ್, ವೆಂಕಟೇಶ ಬಾಗಲವಾಡ, ಪ್ರಹ್ಲಾದ್ ರಾವ್, ಜಗದೀಶ್, ನಿಸಾರ್ ಅಹ್ಮದ್, ಶಂಕರ್ ಜಾನೇಕಲ್ ಸೇರಿದಂತೆ ಉಪಸ್ಥಿತರಿದ್ದರು.

ರಾಯಚೂರಿನಲ್ಲಿ ರಾಜ್ಯ ವಕೀಲರ ಪರಿಷತ್ ಚುನಾವಣೆ ಬಿರುಸು

719 ಮತದಾರರಲ್ಲಿ 585 ಮತದಾನ : ಭದ್ರತೆಯ ಮಧ್ಯೆ ನ್ಯಾಯಾಲಯದಲ್ಲಿ ಮತದಾನ





ರಾಯಚೂರು,ಮಾ.12-

ಕರ್ನಾಟಕ ರಾಜ್ಯ ವಕೀಲರ ಪರಿಷತ್ ಚುನಾವಣೆಯ ಅಂಗವಾಗಿ ರಾಯಚೂರಿನಲ್ಲಿ ಇಂದು ಬಿರುಸಿನ ಮತದಾನ ನಡೆಯಿತು. ಜಿಲ್ಲಾ ನ್ಯಾಯಾಲಯ ಕಟ್ಟಡದ ಗ್ರಂಥಾಲಯ ಸಭಾಂಗಣದಲ್ಲಿ ಕಟ್ಟುನಿಟ್ಟಿನ ಭದ್ರತಾ ವ್ಯವಸ್ಥೆಯ ನಡುವೆ ಮತದಾನ ಪ್ರಕ್ರಿಯೆ ನಡೆಯಿತು.

ರಾಯಚೂರು ಜಿಲ್ಲೆಯಲ್ಲಿ ಒಟ್ಟು 719 ವಕೀಲರು ಮತದಾರರಾಗಿದ್ದು, ಅವರಲ್ಲಿ 585 ಮಂದಿ ಮತದಾನ ಮಾಡಿ ತಮ್ಮ ಮತಹಕ್ಕು ಚಲಾಯಿಸಿದರು. ನ್ಯಾಯಾಲಯದ ಕಲಾಪಗಳ ನಡುವೆ ವಕೀಲರು ಹೆಚ್ಚಿನ ಸಂಖ್ಯೆಯಲ್ಲಿ ಹಾಜರಾಗಿ ಮತದಾನದಲ್ಲಿ ಭಾಗವಹಿಸಿದರು.

ಕರ್ನಾಟಕ ರಾಜ್ಯ ವಕೀಲರ ಪರಿಷತ್ ಸದಸ್ಯ ಸ್ಥಾನಕ್ಕಾಗಿ ರಾಜ್ಯದಾದ್ಯಂತ ಒಟ್ಟು 149 ಅಭ್ಯರ್ಥಿಗಳು ಸ್ಪರ್ಧಿಸುತ್ತಿದ್ದು, ರಾಯಚೂರು ಜಿಲ್ಲೆಯಿಂದ ವೀರಭದ್ರ, ರಾಘವೇಂದ್ರ ಮತ್ತು ಚುಡಾಮಣಿ ಅವರು ಕಣಕ್ಕಿಳಿದಿದ್ದಾರೆ. ಚುನಾವಣಾ ನಿಯಮದ ಪ್ರಕಾರ ಒಬ್ಬ ವಕೀಲರು ಗರಿಷ್ಠ 23 ಅಭ್ಯರ್ಥಿಗಳಿಗೆ ಆದ್ಯತೆಯ ಆಧಾರದ ಮೇಲೆ ಮತದಾನ ಮಾಡುವ ಅವಕಾಶವಿದೆ.

ಸುಪ್ರೀಂ ಕೋರ್ಟ್ ಮಾರ್ಗಸೂಚಿಗಳ ಅನ್ವಯ ಕಟ್ಟುನಿಟ್ಟಿನ ನಿಯಮಗಳನ್ನು ಪಾಲಿಸಿಕೊಂಡು

ಮೂರನೇಯ ಪುಟಕ್ಕೆ

ಎಸ್‌ಸಿ.ಎಸ್‌ಟಿ ಹೆಚ್ಚುವರಿ ಮೀಸಲಾತಿ ಕಾಯ್ದೆ 9ನೇ ಅನುಕ್ರಮಕ್ಕೆ ಸೇರಿಸಲು ಸಂಸದರ ಒತ್ತಾಯ

ಕರ್ನಾಟಕ ಕಾಯ್ದೆ.2022 ಕುರಿತು ಕೇಂದ್ರಕ್ಕೆ ತುರ್ತು ಕ್ರಮಕ್ಕೆ ಮನವಿ : ಸಂಸದ ಜಿ.ಕುಮಾರ ನಾಯಕ

ನವದೆಹಲಿ, ಮಾ.12 :

ಕರ್ನಾಟಕದಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಹೆಚ್ಚುವರಿ ಮೀಸಲಾತಿ ಒದಗಿಸುವ ಉದ್ದೇಶದಿಂದ ಜಾರಿಗೆ ಬಂದಿರುವ ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳು (ರಾಜ್ಯ ಅಧೀನದಲ್ಲಿರುವ ಶಿಕ್ಷಣ ಸಂಸ್ಥೆಗಳಲ್ಲಿ ಆಸನಗಳ ಮೀಸಲು ಹಾಗೂ ಸೇವೆಗಳಲ್ಲಿನ ನೇಮಕಾತಿ ಅಥವಾ ಹುದ್ದೆಗಳ ಮೀಸಲು) ಕಾಯ್ದೆ2022 ಅನ್ನು ಭಾರತೀಯ ಸಂವಿಧಾನದ ಒಂಬತ್ತನೇ ಅನುಕ್ರಮದಲ್ಲಿ ಸೇರಿಸುವಂತೆ ಕೇಂದ್ರ ಸರ್ಕಾರಕ್ಕೆ



ಸಂಸದರು ಒತ್ತಾಯಿಸಿದ್ದಾರೆ.

ರಾಯಚೂರುಯಾದಗಿರಿ ಲೋಕಸಭಾ ಕ್ಷೇತ್ರದ ಸಂಸದ ಜಿ. ಕುಮಾರ ನಾಯಕ ಸೇರಿದಂತೆ ಕರ್ನಾಟಕದ ಹಲವು ಸಂಸದರು ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವರಾದ ಡಾ. ವಿರೇಂದ್ರ ಕುಮಾರ ಅವರಿಗೆ ಪತ್ರ ಬರೆದು ತುರ್ತು ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದ್ದಾರೆ.

ಪತ್ರದಲ್ಲಿ, ಈ ಕಾಯ್ದೆಯನ್ನು ಸಂವಿಧಾನದ 31() ಮತ್ತು 31() ಕಲಂಗಳಡಿ ಒಂಬತ್ತನೇ ಅನುಕ್ರಮದಲ್ಲಿ ಸೇರಿಸುವ ಪ್ರಸ್ತಾವನೆ ಇನ್ನೂ ಕೇಂದ್ರ ಸರ್ಕಾರದ ಮಟ್ಟದಲ್ಲಿ ಬಾಕಿಯಿರುವುದರಿಂದ ರಾಜ್ಯದ ಲಕ್ಷಾಂತರ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಜನರಿಗೆ ನ್ಯಾಯ ಮತ್ತು ಸಮರ್ಪಕ ಪ್ರತಿನಿಧಿತ್ವ ದೊರಕುವಲ್ಲಿ ವಿಳಂಬವಾಗುತ್ತಿದೆ ಎಂದು ತಿಳಿಸಿದ್ದಾರೆ.

ಸಂವಿಧಾನದ 15, 16, 38, 39 ಹಾಗೂ 46ನೇ ಕಲಂಗಳು ಸೂಚಿಸುವ ಸಾಮಾಜಿಕ ನ್ಯಾಯದ ಗುರಿಗಳನ್ನು ಸಾಧಿಸುವ ಉದ್ದೇಶದಿಂದ ಈ ಕಾಯ್ದೆ ಜಾರಿಗೆ ತರಲಾಗಿದೆ. ಸಮಾಜದ ದುರ್ಬಲ ವರ್ಗಗಳ ಶಿಕ್ಷಣ ಮತ್ತು ಆರ್ಥಿಕ ಹಿತಾಸಕ್ತಿಗಳನ್ನು ರಕ್ಷಿಸುವುದು, ಅಸಮಾನತೆಯನ್ನು ಕಡಿಮೆ ಮಾಡುವುದು ಹಾಗೂ ಸಾಮಾಜಿಕ ನ್ಯಾಯವನ್ನು ಬಲಪಡಿಸುವುದು ಇದರ ಪ್ರಮುಖ ಉದ್ದೇಶವಾಗಿದೆ ಎಂದು ಪತ್ರದಲ್ಲಿ ವಿವರಿಸಲಾಗಿದೆ.

ಕರ್ನಾಟಕ ಸರ್ಕಾರವು ಈ ಕಾಯ್ದೆಯನ್ನು ಒಂಬತ್ತನೇ ಅನುಕ್ರಮದಲ್ಲಿ ಸೇರಿಸುವ ಪ್ರಸ್ತಾವನೆಯನ್ನು

ಮೂರನೇಯ ಪುಟಕ್ಕೆ

ಪದವಿಪೂರ್ವ ಶಿಕ್ಷಣ ಇಲಾಖೆಯ ಆಡಳಿತ ವರ್ಗಾವಣೆ ಪ್ರಸ್ತಾವನೆ ಖಂಡನೆ : ಉಪನ್ಯಾಸಕರ ಸಂಘದಿಂದ ಮನವಿ



ರಾಯಚೂರು,ಮಾ.12-

ಪದವಿಪೂರ್ವ ಶಿಕ್ಷಣ ಇಲಾಖೆಯ ಜಿಲ್ಲಾ ಉಪನಿರ್ದೇಶಕರ ಕಚೇರಿಗಳ ಮೇಲಿನ ಆಡಳಿತಾತ್ಮಕ ನಿಯಂತ್ರಣವನ್ನು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ವರ್ಗಾಯಿಸುವ ಸರ್ಕಾರದ ಪ್ರಸ್ತಾವನೆಯನ್ನು ಖಂಡಿಸಿ ಕರ್ನಾಟಕ ರಾಜ್ಯ ಪದವಿ ಪೂರ್ವ ಕಾಲೇಜು ಉಪನ್ಯಾಸಕರ ಸಂಘ ರಾಯಚೂರು ಜಿಲ್ಲಾ ಘಟಕವು ಸರ್ಕಾರಕ್ಕೆ ಮನವಿ ಸಲ್ಲಿಸಿದೆ.

ಈ ಕುರಿತು ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಹಾಗೂ ಶಿಕ್ಷಣ ಸಚಿವರಿಗೆ ಮನವಿ ಸಲ್ಲಿಸಿರುವ ಸಂಘದ ಪದಾಧಿಕಾರಿಗಳು, ಪದವಿಪೂರ್ವ ಶಿಕ್ಷಣ ಇಲಾಖೆಯ ಆಡಳಿತಾತ್ಮಕ ನಿಯಂತ್ರಣವನ್ನು ಜಿಲ್ಲಾ ಪಂಚಾಯಿತಿ

ಮೂರನೇಯ ಪುಟಕ್ಕೆ

ಮಹಿಳೆಯರ ಸ್ವಾವಲಂಬನೆ ಬದುಕಿಗೆ ಸರಸ್ ಮೇಳ ಉತ್ತಮ ಮಾರುಕಟ್ಟೆ - ಡಾ. ಸುರೇಶ ಇಟ್ನಾಳ



ಕೊಪ್ಪಳ ಮಾ.12

ಸರಸ್ ಮೇಳವು ಸ್ವ-ಸಹಾಯ ಗುಂಪಿನ ಮಹಿಳೆಯರಿಗೆ ತಮ್ಮ ಉತ್ಪನ್ನಗಳನ್ನು ನೇರವಾಗಿ ಸಾರ್ವಜನಿಕರಿಗೆ ಪರಿಚಯಿಸಿ, ಮಾರಾಟ ಮಾಡುವ ಮೂಲಕ ಸ್ವಾವಲಂಬನೆ ಬದಕು ರೂಪಿಸಿಕೊಳ್ಳಲು ಅವರಿಗೆ ಇದು ಉತ್ತಮ ಮಾರುಕಟ್ಟೆಯಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಹೇಳಿದರು.

ಅವರು ಬುಧವಾರ ಕೊಪ್ಪಳ ನಗರದ ತೋಟಗಾರಿಕೆ ಜಂಟಿ ನಿರ್ದೇಶಕರ ಕಚೇರಿ ಸಭಾಂಗಣದಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಸಂಜೀವಿನಿ-ಕೆ.ಎಸ್.ಆರ್.ಎಲ್.ಪಿ.ಎಸ್ ಬೆಂಗಳೂರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಜಿಲ್ಲಾ ಕೌಶಲ್ಯ ಮಿಷನ್ ಕೊಪ್ಪಳ ಹಾಗೂ ಸಂಜೀವಿನಿ ಎನ್.ಆರ್.ಎಲ್.ಎಂ ಮತ್ತು ನಲ್ಮ ಯೋಜನೆಯಡಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಮಾರ್ಚ್ 11 ರಿಂದ 13ರವರೆಗೆ ಮೂರು ದಿನಗಳ ಕಾಲ ಹಮ್ಮಿಕೊಳ್ಳಲಾದ 2026ರ ಸರಸ್ ಮೇಳಕ್ಕೆ ಚಾಲನೆ ನೀಡಿ ಮಾತನಾಡಿದರು. ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಪ್ರಯುಕ್ತ ಸರಸ್ ಮೇಳ ಆಯೋಜಿಸಲಾಗಿದ್ದು, ಒಳ್ಳೆಯ ವಿಚಾರವಾಗಿದೆ. ಈ ಕಾರ್ಯಕ್ರಮದ ಮೂಲಕ ಜನರಿಗೆ ಮತ್ತು ವಿಶೇಷವಾಗಿ ಇಂದಿನ ಯುವ ಸಮುದಾಯಕ್ಕೆ ನಮ್ಮ ಭಾಗದ ಕಲೆ, ಸಂಸ್ಕೃತಿಯನ್ನು ಪರಿಚಯಿಸುವುದರ ಜೊತೆಗೆ ಗ್ರಾಮೀಣ ಕಲೆ, ಪಾರಂಪರಿಕ ಆಹಾರ ಪದ್ದತಿಗಳು, ಸಾವಯವ ಆಹಾರ ಪದ್ಧತಿ ಮತ್ತು ಉಡುಗೆ ತೊಡುಗೆಗಳ ಬಗ್ಗೆ ತಿಳಿಸಿಕೊಡಲಾಗುತ್ತಿದೆ. ಈ ಮೇಳದಲ್ಲಿನ ಬಹುತೇಕ ಎಲ್ಲಾ ಉತ್ಪನ್ನಗಳು ಮಹಿಳಾ ಸ್ವಸಹಾಯ ಗುಂಪುಗಳ ಸದಸ್ಯರಿಗೆ ಸೇರಿದ್ದರಿಂದ ಮಹಿಳಾ ಉದ್ಯಮಿಗಳಿಗೆ ಉತ್ತಮ ಆದಾಯ ಒದಗಿಸಲು ಈ ಮೇಳವು ಪೂರಕವಾಗಲಿದೆ. ಸ್ವ-ಸಹಾಯ ಗುಂಪಿನ ಮಹಿಳೆಯರ ಉತ್ಪನ್ನಗಳಿಗೆ ಉತ್ತಮ ಮಾರುಕಟ್ಟೆ ಒದಗಿಸುವುದರ ಜೊತೆಗೆ ಮಹಿಳಾ ಉದ್ಯಮಶೀಲತೆಗೆ ಉತ್ತೇಜನ ನೀಡುವಲ್ಲಿ ಇಂತಹ ಕಾರ್ಯಕ್ರಮಗಳು ಪ್ರಮುಖ ಪಾತ್ರ ವಹಿಸಲಿವೆ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಟಿ.ಕೃಷ್ಣಮೂರ್ತಿ, ಜಿಲ್ಲಾ ಕೌಶಲ್ಯ ಮಿಷನ್ ವ್ಯವಸ್ಥಾಪಕರು, ಎನ್.ಆರ್.ಎಲ್.ಎಂ ಮತ್ತು ನಲ್ಮ ಯೋಜನೆಯ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಹಾಗೂ ಮಹಿಳಾ ಸ್ವ-ಸಹಾಯ ಗುಂಪಿನ ಸದಸ್ಯರು ಉಪಸ್ಥಿತರಿದ್ದರು.

ಸ್ವ-ಸಹಾಯ ಗುಂಪಿನ ಸದಸ್ಯರ ಉತ್ಪನ್ನಗಳಿಗೆ ಮಾರುಕಟ್ಟೆ ಸೌಲಭ್ಯ: ನಗರ ಮತ್ತು ಗ್ರಾಮೀಣ ಮಹಿಳಾ ಸ್ವ-ಸಹಾಯ ಗುಂಪಿನ ಸದಸ್ಯರು ತಯಾರಿಸುತ್ತಿರುವ ಉತ್ಪನ್ನಗಳಿಗೆ ಸೂಕ್ತ ಮಾರುಕಟ್ಟೆ ಸೌಲಭ್ಯ ಒದಗಿಸುವ ಉದ್ದೇಶದಿಂದ ಹಮ್ಮಿಕೊಳ್ಳಲಾದ ಜಿಲ್ಲಾ ಮಟ್ಟದ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳದಲ್ಲಿ ಒಟ್ಟು 30 ಸ್ಟಾಲ್‌ಗಳ ವ್ಯವಸ್ಥೆ ಮಾಡಲಾಗಿದ್ದು, ವಿವಿಧ ನಗರ ಸ್ಥಳೀಯ ಸಂಸ್ಥೆಗಳ ಹಾಗೂ ಗ್ರಾಮ ಪಂಚಾಯಿತಿಗಳಿಂದ ಬಂದ ಸ್ವ-ಸಹಾಯ ಗುಂಪಿನ ಮಹಿಳೆಯರು ತಾವು ತಯಾರಿಸಿದ ವಿವಿಧ ಉತ್ಪನ್ನಗಳನ್ನು ಪ್ರದರ್ಶಿಸಿ ಮಾರಾಟ ಮಾಡಿದರು.

ಮೇಳದಲ್ಲಿ ಕಿನ್ನಾಳ ಗೊಂಬೆಗಳು, ಗಾಣದಿಂದ ತಯಾರಿಸಿದ ಕೊಬ್ಬರಿ ಎಣ್ಣೆ, ಕೈಮಗ್ಗದಿಂದ ತಯಾರಿಸಿದ ಕಾಟನ್ ಸೀರೆಗಳು, ಹ್ಯಾಂಡ್ ಮೇಡ್ ಬ್ಯಾಗ್‌ಗಳು, ಕೌದಿ, ಲಮಾಣಿ ಕೈಗಾರಿಕಾ ಉತ್ಪನ್ನಗಳು, ಬಾಳೆ ನಾರು ಉತ್ಪನ್ನಗಳು, ಬಿದಿರಿನ ಬುಟ್ಟಿಗಳು, ರಾಗಿ ಪೌಡರ್, ಸಿರಿಧಾನ್ಯ ಪೌಡರ್, ಅಗರಬತ್ತಿಗಳು, ಮಸಾಲೆ ಹಾಗೂ ವಿವಿಧ ರೀತಿಯ ಉಪ್ಪಿನ ಕಾಯಿ, ಸಜ್ಜೆ, ಜೋಳ ಮತ್ತು ರಾಗಿಯ ಮಂಡಾಳು, ಚಾಕೊಲೇಟ್, ಸಾವಯವ ಉತ್ಪನ್ನಗಳು, ಹಪ್ಪಳ, ಚಕ್ಕುಲಿ, ನಿಪ್ಪಟ್ಟು, ಕಜ್ಜಾಯ ಸೇರಿದಂತೆ ವಿವಿಧ ಆಹಾರ ಪದಾರ್ಥಗಳು ಹಾಗೂ ಕರಕುಶಲ ವಸ್ತುಗಳನ್ನು ಮಾರಾಟಕ್ಕೆ ಇಡಲಾಗಿದ್ದು, ಜನರ ಮೆಚ್ಚುಗೆಗೆ ಪಾತ್ರವಾಗಿವೆ. ಈ ಮೇಳಕ್ಕೆ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಉತ್ಪನ್ನಗಳನ್ನು ಖರೀದಿಸುತ್ತಿದ್ದಾರೆ.

ಉಪ ಚುನಾವಣೆ : ವಿವಿಧ ಸೆಕ್ಟರ ಅಧಿಕಾರಿಗಳ ಸಭೆ



ಬಾಗಲಕೋಟೆ ,ಮಾ.12

ಬರುವ ಬಾಗಲಕೋಟೆ ವಿಧಾನಸಭೆ ಉಪ ಚುನಾವಣೆಗೆ ಸಂಬಂಧಿಸಿದಂತೆ, ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿ ಸಂಗಪ್ಪ ಅವರ ಅಧ್ಯಕ್ಷತೆಯಲ್ಲಿ ಸೆಕ್ಟರ ಅಧಿಕಾರಿ ಹಾಗೂ ಸೆಕ್ಟರ ಪೊಲೀಸ್ ಅಧಿಕಾರಿಗಳ ಸಭೆ ಮಂಗಳವಾರ ಜರುಗಿತು.

ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ಜರುಗಿದ ಸೆಕ್ಟರ ಅಧಿಕಾರಿಗಳ ಸಭೆಯಲ್ಲಿ ದುರ್ಬಲ ಪ್ರದೇಶ ಗುರುತಿಸಲು ತಂಡಗಳು ರಚಿಸಿ, ನೇಮಿಸಲಾದ ಸೆಕ್ಟರ ಮತಗಟ್ಟೆಗಳನ್ನು ಹಾಗೂ ಮತಗಟ್ಟೆ ವ್ಯಾಪ್ತಿಗೆ ಒಳಪಡುವ ಪ್ರದೇಶಗಳಿಗೆ ಭೇಟಿ ನೀಡಿ ಮತದಾರರನ್ನು, ಮತದಾನದ ದಿನದಂದು ಭೀತಿಗೊಳಪಡಿಸಿ ಮತದಾನವನ್ನು ಮಾಡುವಂತೆ ಒತ್ತಾಯಿಸುವ ವ್ಯಕ್ತಿಗಳ ಮಾಹಿತಿಯನ್ನು ಪಡೆಯುವ ಕುರಿತು ಅಗತ್ಯ ಕ್ರಮವಹಿಸುವಂತೆ ಸೂಚನೆ ನೀಡಿದರು. ಸೆಕ್ಟರ ಅಧಿಕಾರಿಗಳು ತಮಗೆ ನೇಮಿಸಲಾದ ಮತಗಟ್ಟೆಗಳನ್ನು ಭೇಟಿ ನೀಡಿ ಎಲ್ಲ ಮೂಲಭೂತ ಸೌಕರ್ಯಗಳು ಇರುವದನ್ನು ಖಚಿತಪಡಿಸಿಕೊಳ್ಳಬೇಕು. ಮತಗಟ್ಟೆಗಳಲ್ಲಿ ಕುಡಿಯುವ ನೀರು, ಶೌಚಾಲಯ, ವಿದ್ಯುತ್, ರ‍್ಯಾಂಪ್ ಸೇರಿದಂತೆ ಅಗತ್ಯ ಮೂಲಭೂತ ಸೌಲಭ್ಯಗಳ ವ್ಯವಸ್ಥೆ ಇರಬೇಕು. ಅಲ್ಲದೇ ಮತದಾರರಿಗೆ ಯಾವುದೇ ತೊಂದರೆ ಆಗದಂತೆ ವ್ಯವಸ್ಥೆ ಮಾಡಲು ತಿಳಿಸಿದರು.

ಚುನಾವಣೆಯಲ್ಲಿ ಸೆಕ್ಟರ ಅಧಿಕಾರಿಗಳ ಪಾತ್ರ ಅತೀ ಮಹತ್ವದ್ದಾಗಿದ್ದು, ಯಾವುದೇ ಲೋಪ ಆಗದಂತೆ ಕರ್ತವ್ಯವನ್ನು ಅಚ್ಚುಕಟ್ಟಾಗಿ, ಯಾವುದೇ ಪಕ್ಷದ ಪರವಾಗಿ ಕಾರ್ಯನಿರ್ವಹಿಸದೇ ನಿಷ್ಪಕ್ಷಪಾತವಾಗಿ ಕಾರ್ಯನಿರ್ವಹಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ, ತಹಶೀಲ್ದಾರ ವಾಸುದೇವ ಸ್ವಾಮಿ, ಡಿವಾಯ್‌ಎಸ್‌ಪಿ ಗಜಾನನ ಸುತಾರ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಎಲ್.ಪಿ.ಜಿ ವಿತರಕರು, ಸೇಲ್ಸ್ ಅಧಿಕಾರಿಗಳೊಂದಿಗೆ ಡಿಸಿ ಸಭೆ

ಯುದ್ದದ ಪರಿಸ್ಥಿತಿ : ಸಿಲಿಂಡರ ವಿತರಣೆಯಲ್ಲಿ ತೊಂದರೆ ಇಲ್ಲ



ಬಾಗಲಕೋಟೆ . ಮಾ.11

ಜಾಗತಿಕ ಮಟ್ಟದಲ್ಲಿ ನಡೆಯುತ್ತಿರುವ ಯುದ್ದ ಪರಿಸ್ಥಿತಿಗಳ ಹಿನ್ನಲೆಯಲ್ಲಿ ಕೇಂದ್ರ ಸರಕಾರದ ಮಾರ್ಗಸೂಚಿಯನ್ವಯ ಎಲ್.ಪಿ.ಜಿ ಗ್ಯಾಸ್ ವಿತರಣೆಗೆ ಕ್ರಮಕೈಗೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಬುಧವಾರ ಜಿಲ್ಲೆಯ ಎಲ್.ಪಿ.ಜಿ ವಿತರಕರ ಹಾಗೂ ಸೇಲ್ಸ್ ಅಧಿಕಾರಿಗಳ ಜೊತೆ ಹಮ್ಮಿಕೊಂಡ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಜಿಲ್ಲೆಯಲ್ಲಿ ಗೃಹ ಬಳಕೆಯ ಎಲ್‌ಪಿಜಿ ಸಿಲಿಂಡರಗಳ ಸಮರ್ಪಕ ಸಂಗ್ರಹವಿದ್ದು, ಸರಬರಾಜು ಸರಾಗವಾಗಿ ನಡೆಯುತ್ತಿದೆ. ಸಾರ್ವಜನಿಕರು ಯಾವುದೇ ರೀತಿಯ ಆಂತಕಕ್ಕೊಳಗಾಗದೆ, ಅಗತ್ಯವಿರುವಷ್ಟು ಸಿಲಿಂಡರ ಪಡೆಯುವಂತೆ ಜಿಲ್ಲಾಧಿಕಾರಿಗಳು ಮನವಿ ಮಾಡಿದ್ದಾರೆ.

ಕೆಲವೊಂದು ಕಡೆಗಳಲ್ಲಿ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ಮಾಹಿತಿಯಿಂದ ಜನರಲ್ಲಿ ಅನಗತ್ಯ ಗೊಂದಲ ಸೃಷ್ಠಿಯಾಗುತ್ತಿದೆ. ಆದರೆ ಜಿಲ್ಲೆಯಲ್ಲಿ ಅನೀಲ ಸರಬರಾಜು ವ್ಯವಸ್ಥೆ ಸಮರ್ಪಕವಾಗಿದ್ದು, ಯಾವುದ ಕೊರತೆ ಇರುವದಿಲ್ಲ. ಸಿಲಿಂಡರ ವಿತರಣಾ ಸಂಸ್ಥೆಗಳಿಗೂ ಸರಬರಾಜು ನಿರಂತರವಾಗಿ ನಡೆಯುತ್ತಿದ್ದು, ಜನಸಾಮಾನ್ಯರು ಆತಂಕಪಡಬೇಕಾದ ಅಗತ್ಯವಿಲ್ಲ. ಅನಾವಶ್ಯಕವಾಗಿ ಹೆಚ್ಚಿನ ಪ್ರಮಾಣದಲ್ಲಿ ಸಿಲಿಂಡರ ಸಂಗ್ರಹಿಸಿಕೊಳ್ಳಬಾರದು. ಆದರೆ ಗೃಹ ಬಳಕೆಯ ಸಿಲೆಂಡರ ಬುಕ್ಕಿಂಗ್ ಅವಧಿಯನ್ನು 21 ದಿನದಿಂದ 25 ದಿನಗಳ ವರೆಗೆ ವಿಸ್ತರಣೆ ಮಾಡಲಾಗಿದೆ ಎಂದು ತಿಳಿಸಿದರು.

ಸಿಲಿಂಡರ ಪೂರೈಕೆಯನ್ನು ಆಸ್ಪತ್ರೆಗಳು, ಶಿಕ್ಷಣ ಸಂಸ್ಥೆ ಹಾಗೂ ಇಂದಿರಾ ಕ್ಯಾಂಟಿನ್‌ಗಳಂತಹ ಅಗತ್ಯ ವಲಯಗಳಿಗೆ ಅನುಗುಣವಾಗಿ ಆದ್ಯತೆ ನೀಡಲು ಜಿಲ್ಲೆಯ ಎಲ್ಲ ಎಲ್‌ಪಿಜಿ ವಿತರಕರಿಗೆ ಸೂಚನೆ ನೀಡಿದರು. ಇದಲ್ಲದೇ ಸಾರ್ವಜನಿಕರ ಹಿತದೃಷ್ಠಿಯಿಂದ ಬಸ್, ರೈಲು ನಿಲ್ದಾಣಗಳಲ್ಲಿ ಇರುವ ಹೋಟಲ್ ಮತ್ತು ಕ್ಯಾಂಟಿನ್‌ಗಳಿಗೆ ಆದ್ಯತೆ ಮೇಲೆ ವಿತರಣೆ ಮಾಡಲು ತಿಳಿಸಿದಿರು.

ಗೃಹ ಬಳಕೆಯ ಸಿಲಿಂಡರಗಳನ್ನು ವಾಣಿಜ್ಯ ಉದ್ದೇಶಕ್ಕಾಗಿ ಬಳಕೆ ಮಾಡುವುದು ಕಂಡುಬಂದಲ್ಲಿ ಸೂಕ್ತ ಕಾನೂನು ಕ್ರಮಕೈಗೊಳ್ಳಲಾಗುವುದು. ತಾಲೂಕಾ ಮಟ್ಟದ ತಂಡಗಳು ತಮ್ಮ ವ್ಯಾಪ್ತಿಯ ಹೋಟೆಲ್ ಮತ್ತು ದಾಬಾಗಳಿಗೆ ನಿರಂತರ ದಾಳಿ ನಡೆಸಬೇಕು. ದಾಳಿಯಲ್ಲಿ ಅನಧಿಕೃತ ಸಿಲೆಂಡರ ಬಳಕೆ ಕಂಡುಬಂದಲ್ಲಿ ಸೂಕ್ತ ಕಾನೂನು ಕ್ರಮಕೈಗೊಳ್ಳಲು ಸೂಚಿಸಿದರು. ಜಿಲ್ಲೆಯಲ್ಲಿ 4,78,596 ಗೃಹ ಬಳಕೆಯ ಕನೆಕ್ಷನ್‌ಗಳಿದ್ದು, ಇದರ ಜೊತೆಗೆ 74 ಸಾವಿರ ಎಲ್‌ಪಿಜಿ ಸಿಲಿಂಡರಗಳನ್ನು ಸರಕಾರದ ವಿವಿಧ ಯೋಜನೆಗಳಿಗೆ ನೀಡಲಾಗುತ್ತಿದೆ ಎಂದು ಸಭೆಗೆ ತಿಳಿಸಲಾಯಿತು.

ಜಿಲ್ಲೆಗೆ ಎಚ್.ಪಿ.ಸಿ, ಬಿಪಿಸಿ ಹಾಗೂ ಐಓಸಿ ಕಂಪನಿಗಳ ಮೂಲಕ ಎಲ್‌ಪಿಜಿ ಸಿಲಿಂಡರಗಳು ಸರಬರಾಜು ಆಗುತ್ತಿವೆ. ಕಂಪನಿಗಳು ಜಿಲ್ಲೆಗೆ ಪ್ರತಿ ತಿಂಗಳು ಸರಬರಾಜು ಮಾಡುವ ಎಲ್‌ಪಿಜಿ ಮಾಹಿತಿಯನ್ನು ಜಿಲ್ಲಾಡಳಿತಕ್ಕೆ ನೀಡಬೇಕು. ಬುಕ್ಕಿಂಗ್‌ನಲ್ಲಿ ತಾಂತ್ರಿಕ ದೋಷ ಇರುವ ಬಗ್ಗೆ ಎಲ್‌ಪಿಜಿ ವಿತರಕರು ಸಭೆಗೆ ತಿಳಿಸಿದಾಗ ತಾಂತ್ರಿಕ ದೋಷವನ್ನು ತಕ್ಷಣ ಸರಿಪಡಿಸುವ ಕೆಲಸವಾಗಬೇಕು. ವಿವಿಧ ಕಂಪನಿಯ ಸೇಲ್ಸ್ ಅಧಿಕಾರಿಗಳು ಅಗತ್ಯವಿರುವ ಅನಿಲ ಪೂರೈಕೆಗೆ ಕ್ರಮಕೈಗೊಳ್ಳಲು ತಿಳಿಸಿದರು.

ಸಭೆಯಲ್ಲಿ ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ ಸೇರಿದಂತೆ ಜಿಲ್ಲೆಯ ಎಲ್ಲ ಆಹಾರ ಶಿರಸ್ತೇದಾರರು ಹಾಗೂ ಆಹಾರ ನಿರೀಕ್ಷಕರು ಉಪಸ್ಥಿತರಿದ್ದರು.

ಎಲ್‌ಪಿಜಿ ಸೇಲ್ಸ್ ಅಧಿಕಾರಿಗಳ ವಿವರ

ಜಿಲ್ಲೆಗೆ ಎಲ್‌ಪಿಜಿ ಸರಬರಾಜು ವಿತರಣೆಯಲ್ಲಿ ಹಾಗೂ ಬುಕ್ಕಿಂಗ್ ತಂತ್ರಾಂಶದಲ್ಲಿ ತೊಂದರೆ ಉಂಟಾದಲ್ಲಿ ಎಲ್‌ಪಿಜಿ ವಿತರಕರು ವಿವಿಧ ಕಂಪನಿಗಳ ಸೇಲ್ಸ್ ಅಧಿಕಾರಿಗಳ ಮೊಬೈಲ್ ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ. ಎಚ್‌ಪಿಎಸ್ ಕಂಪನಿ ಸೇಲ್ಸ್ ಅಧಿಕಾರಿ ಅಸಿಸ್ ದುಬೆ (9425140800), ಬಿಪಿಸಿ ಕಂಪನಿಯ ಸೇಲ್ಸ್ ಅಧಿಕಾರಿ ಅಸಿಸ್ ಅಗರವಾಲ್ (9131115185), ಐಓಸಿ ಕಂಪನಿಯ ಸೇಲ್ಸ್ ಅಧಿಕಾರಿ ಅಶೋಕ ಕೋಳಿ (9958980557).



ಕತೃತ್ವ, ಮಿತೃತ್ವ, ಮಾತೃತ್ವ ಶಕ್ತಿ ಮಹತ್ವದ್ದು : ಡಾ: ಮೀನಾ ಚಂದಾವರ್ಕರ

ಬಾಗಲಕೋಟ, ಮಾ.11

ಸಹಾಯ ಮಡುವ ಕೈಗಳು ಪ್ರಾರ್ಥನೆ ಮಾಡುವ ತುಟಿಗಳಿಗಿಂತ ಶ್ರೇಷ್ಠವಾಗಿದ್ದು, ಕತೃತ್ವ. ಮಿತೃತ್ವಕ್ಕಿಂತ ಮಾತೃತ್ವ ಶಕ್ತಿ ದೊಡ್ಡದ ಹಾಗೂ ಮಹತ್ವದಾಗಿದೆ ಎಂದು ಬಿವಿವಿ ಸಂಘದ ಮುಖ್ಯ ಸಲಹೆಗಾರರಾದ ಡಾ: ಮೀನಾ ಆರ್.ಚಂದವರ್ಕರ್ ಅವರು ಹೇಳಿದರು.

ನಗರದ ಬಿವಿವಿ ಸಂಘದ ನೂತನ ಸಭಾಭವನದಲ್ಲಿ ಬುಧವಾರ ಆರ್ಯುವೇದಿಕ, ಫಾರ್ಮಸಿ, ಹೊಮಿಯೋಪತಿ, ನ್ಯಾಚುರೋಪತಿ ಮಹಾವಿದ್ಯಾಲಯಗಳ ಸಹಯೋಗದಲ್ಲಿ ಪ್ರೇರಣಾ ಮಹಿಳಾ ಸಬಲೀಕರಣ ವತಿಯಿಂದ ಹಮ್ಮಿಕೊಂಡ ಮಹಿಳಾ ದಿನಾಚರಣೆಯಲ್ಲಿ ಪ್ರೇರಣಾ ಫಲಕವನ್ನು ಅನಾವರಣಗೊಳಿಸುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು ಪ್ರೇರಣಾ ಎನ್ನುವ ಶಬ್ದ ಬಹಳ ಅರ್ಥಪೂರ್ಣವಾದದ್ದು ಮಹಿಳಾ ದಿನಾಚರಣೆಯು ಕೇವಲ ಮಾರ್ಚ್ 8 ರಂದು ಆಚರಿಸುವ ದಿನವಲ್ಲ. ಮಹಿಳೆ ಎಂದರೇ ಪ್ರಕೃತಿ, ತಾಯಿಯೆಂದರೆ ಸಂಸ್ಕೃತಿ, ಒಬ್ಬ ಮಹಿಳೆಯು ಒಂದು ವಿಶ್ವವಿದ್ಯಾಲಯ ಸಮ. ಪ್ರತಿಯೊಂದು ಕ್ಷೇತ್ರದಲ್ಲಿಯೂ ಮಹಿಳೆಯರು ಇದ್ದಾರೆ, ಮಹಿಳಾ ಸಶಕ್ತಿಕರಣವೂ ಮಹಿಳೆಯರಿಂದಲೇ ಆಗುವುದು ಎಂದರು. ಪ್ರಾಸ್ತಾವಿಕವಾಗಿ ಮಾತನಾಡಿದ ಡಾ: ತೃಪ್ತಿ ದರ್ಬಾರ ಅವರು ಮಹಿಳಾ ದಿನಾಚರಣೆಯ ಕುರಿತು ಹಮ್ಮಿಕೊಳ್ಳಲಾಗಿದ್ದ ಹಲವಾರು ಚಟುವಟಿಕೆಗಳಲ್ಲಿ ವಿಜೇತರಾದವರಿಗೆ ಪ್ರಮಾಣ ಪತ್ರವನ್ನು ನೀಡಿದರು.

ಕಾರ್ಯಕ್ರಮದಲ್ಲಿ ಬಿವಿವಿ ಸಂಘದ ಆರ್ಯುವೇದಿಕ, ಹೊಮಿಯೋಪತಿಯ ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷರಾದ ಮಲ್ಲಿಕಾರ್ಜುನ ಸಾಸನೂರ್, ಪ್ರಾಚಾರ್ಯರುಗಳಾದ ಡಾ.ವಾಯ್. ಶ್ರೀನಿವಾಸ, ಡಾ. ಅರುಣಕುಮಾರ ಹೂಲಿ, ಡಾ. ಎಮ್. ಎಸ್. ಹಿರೇಮಠ, ಡಾ. ವಿದ್ಯಾಶ್ರೀ, ಡಾ. ವೀಣಾ ಯಲವಾಗಿ. ಡಾ.ತೃಪ್ತಿ ಡಾ. ವಿಜಯಲಕ್ಷ್ಮೀ ಪಾಟೀಲ ಸೇರಿದಂತೆ ಮತ್ತು ಭೋದಕ ಭೋದಕೇತರ ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



ಜನಸಂಪರ್ಕ ಸಭೆ : 9 ದೂರು ಸ್ವೀಕಾರ

ಬಾಗಲಕೋಟೆ : ಮಾ.12

ಬಾಗಲಕೋಟೆ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಎಂ.ಬಿ.ನಂದಗಾಂವಿ ಅವರ ನೇತೃತ್ವದಲ್ಲಿ ನವನಗರದ ತಾಲೂಕಾ ಪಂಚಾಯತ ಸಭಾಭವನದಲ್ಲಿ ಬುಧವಾರ ಜನಸಂಪರ್ಕ ಸಭೆ ಜರುಗಿತು.

ಜನಸಂಪರ್ಕ ಸಭೆಯಲ್ಲಿ ಸಾರ್ವಜನಿಕರಿಂದ 9 ದೂರು ಅರ್ಜಿ ಬಂದಿದ್ದು, ಅರ್ಜಿಗಳನ್ನು ಹಾಜರಿದ್ದ ಅಧಿಕಾರಿಗಳ ಸಮಕ್ಷಮ ಕೂಡಲೇ ನಿಯಮಾನುಸಾರ ಕ್ರಮ ಜರುಗಿಸಿ ಸಂಬಂಧಿಸಿದ ಅರ್ಜಿದಾರರಿಗೆ ಹಿಂಬರಹ, ಮಾಹಿತಿ ನೀಡುವಂತೆ ಅಧಿಕಾರಿಗಳು ಸೂಚನೆ ನೀಡಲಾಯಿತು. ಎಲ್ಲ ಇಲಾಖೆಯ ಅಧಿಕಾರಿಗಳ ಕಾರ್ಯವೈಖರಿಗಳ ಬಗ್ಗೆ ವಿಚಾರಿಸಿ ಸಾರ್ವಜನಿಕ ಕುಂದುಕೊರತೆಗಳನ್ನು ಆದ್ಯತೆಯ ಆಧಾರದ ಮೇಲೆ ನಿಯಮಾನುಸಾರ ಕ್ರಮ ಜರುಗಿಸಲು ಮತ್ತು ಸಾರ್ವಜನಿಕರು ಸಲ್ಲಿಸಿದ ಅರ್ಜಿಗಳನ್ನು ಸ್ವೀಕೃತಿ ಮಾಡಿಕೊಂಡು ಸಂಬಂಧಿಸಿದವರಿಗೆ ಸ್ವೀಕೃತಿ ನೀಡಲು ತಿಳಿಸಿದರು.

ಅರ್ಜಿಗಳ ಬಗ್ಗೆ ನಿವಾಕಾರಣ ಬಾಕಿ ಇಟ್ಟುಕೊಳ್ಳದೇ ನಿಯಮಾನುಸಾರ ಕ್ರಮಜರುಗಿಸಲು ತಿಳಿಸಿದರ ಪೊಲೀಸ್ ಅಧೀಕ್ಷಕರು ಶಾಲೆ, ಕಾಲೇಜು ಹಾಗೂ ವಸತಿ ನಿಲಯಗಳ ಆವರಣದಲ್ಲಿ ಮತ್ತು ಅಕ್ಕ-ಪಕ್ಕದಲ್ಲಿ ಅಪಾಯಕಾರಿ ರೀತಿಯಲ್ಲಿರುವ ವಿದ್ಯುತ್ ಕಂಬ ಪರಿವರ್ತಕ ಹಾಗೂ ಇತರೆ ಇಲೆಕ್ಟ್ರೀಕ್ ಸಾಧನಗಳನ್ನು ತುರ್ತಾಗಿ ಸ್ಥಳಾಂತರ ಮಾಡಲು ಹಾಜರಿದ್ದ ಅಧಿಕಾರಿಗಳಿಗೆ ಸೂಚಿಸಿದರು. ಸಾರ್ವಜನಿಕ ಶೌಚಾಲಯಗಳನ್ನು ಸರಿಯಾಗಿ ನಿರ್ವಹಣೆ ಮಾಡುವುದು, ಬಯಲು ಮುಕ್ತ ಶೌಚಾಲಯ ಆಗುವ ನಿಟ್ಟಿನಲ್ಲಿ ಕ್ರಮಕೈಗೊಳ್ಳಲು ಸೂಚಿಸಿದರು.

ಕರ್ನಾಟಕ ಪೊಲೀಸ್ ಠಾಣೆಯ ಉಪಾಧ್ಯಕ್ಷರಾದ ಸುರೇಶರೆಡ್ಡಿ ಪೊಲೀಸ್ ನಿರೀಕ್ಷಕ-1 ಬಿ.ಎ.ಬಿರಾದಾರ, ಪೊಲೀಸ್ ನಿರೀಕ್ಷಕ-3 ಎನ್.ಆರ್.ಖಿಲಾರೆ ಸೇರಿದಂತೆ ಬಾಗಲಕೋಟೆ ತಾಲೂಕಾ ಮಟ್ಟದ ವಿವಿಧ ಇಲಾಖೆಯ 34 ಜನ ಅಧಿಕಾರಿಗಳು ಉಪಸ್ಥಿತರಿದ್ದರು.

ಬಳ್ಳಾರಿ: ಜಿಲ್ಲಾ ಮಟ್ಟದ ಹೆಚ್‌ಪಿವಿ ಲಸಿಕಾ ಅಭಿಯಾನಕ್ಕೆ ಚಾಲನೆ

14 ವರ್ಷದ ಹೆಣ್ಣು ಮಕ್ಕಳು ತಪ್ಪದೇ ಹೆಚ್.ಪಿ.ವಿ ಲಸಿಕೆ ಪಡೆಯಿರಿ: ಜಿಪಂ ಸಿಇಓ ಮಹಮ್ಮದ್ ಹಾರೀಸ್ ಸುಮೇರ್



ಬಳ್ಳಾರಿ,ಮಾ.12

ಜಿಲ್ಲೆಯಲ್ಲಿನ 14 ವರ್ಷದ ಹೆಣ್ಣು ಮಕ್ಕಳು ತಪ್ಪದೇ ಹೆಚ್.ಪಿ.ವಿ ಲಸಿಕೆ ಹಾಕಿಸಿಕೊಳ್ಳಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಆಸ್ಪತ್ರೆ ಇವರ ಸಹಯೋಗದಲ್ಲಿ ಜಿಲ್ಲಾ ಆಸ್ಪತ್ರೆಯಲ್ಲಿ ಬುಧವಾರ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಹೆಚ್.ಪಿ.ವಿ ಲಸಿಕಾ ಅಭಿಯಾನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಹೆಣ್ಣು ಮಕ್ಕಳ ಜೀವನದಲ್ಲಿ ಗಂಭೀರ ಆರೋಗ್ಯ ಸಮಸ್ಯೆಯನ್ನುಂಟು ಮಾಡುವ ಗರ್ಭಕಂಠದ ಕ್ಯಾನ್ಸರ್ ತಡೆಗೆ ಈ ಲಸಿಕೆ ಅತ್ಯಂತ ಉಪಯುಕ್ತವಾಗಿದ್ದು, ಜಿಲ್ಲೆಯಲ್ಲಿ 14 ವರ್ಷದ ಹೆಣ್ಣು ಮಕ್ಕಳಿಗೆ ಉಚಿತ ಹೆಚ್.ಪಿ.ವಿ(ಹೂಮನ್ ಪ್ಯಾಪಿಲೋಮ ವೈರಸ್)ವಿರುದ್ಧದ ಲಸಿಕೆ ನೀಡಲಾಗುತ್ತಿದೆ. ಪೋಷಕರು ತಮ್ಮ ಮಕ್ಕಳಿಗೆ ತಪ್ಪದೇ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗಿ ಲಸಿಕೆ ಹಾಕಿಸಬೇಕು ಎಂದು ತಿಳಿಸಿದರು.

ಸಾಮಾನ್ಯವಾಗಿ ವೈಯಕ್ತಿಕ ಶುಚಿತ್ವ, ಜನನಾಂಗಗಳಲ್ಲಿ ತೊಂದರೆ, ಹುಣ್ಣು, ಅಸುರಕ್ಷಿತ ಲೈಂಗಿಕ ಸಂಪರ್ಕದಿಂದ ಹರಡುವ ಹೂಮನ್ ಪ್ಯಾಪಿಲೋಮ ವೈರಸ್ (ಹೆಚ್.ಪಿ.ವಿ) ಸೋಂಕು ಕ್ರಮೇಣ ಗರ್ಭಕಂಠದ ಜೀವಕೋಶಗಳಲ್ಲಿ ಬದಲಾವಣೆಗಳಾಗಿ ಕ್ಯಾನ್ಸರ್ ಆಗಿ ಬದಲಾಗುತ್ತದೆ. ಈ ಹಿನ್ನಲೆಯಲ್ಲಿ ಆರೋಗ್ಯಕ್ಕೆ ಮಾರಕವಾಗುವುದನ್ನು ತಡೆಯಲು ಹೆಚ್.ಪಿ.ವಿ ಲಸಿಕೆಯನ್ನು ಸರ್ಕಾರದ ಮಾರ್ಗಸೂಚಿಯಡಿ 14 ವರ್ಷದ ಹೆಣ್ಣು ಮಕ್ಕಳಿಗೆ ಉಚಿತವಾಗಿ ಹಾಕಲಾಗುತ್ತಿದ್ದು, ಇದರ ಸದುಪಯೋಗ ಪಡೆದುಕೊಳ್ಳಲು ಹತ್ತಿರದ ಆರೋಗ್ಯ ಕೇಂದ್ರಗಳಿಗೆ ಭೇಟಿ ನೀಡಬಹುದು ಎಂದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಮಾತನಾಡಿ, ಮಹಿಳೆಯರಲ್ಲಿ ಹೆಚ್ಚಾಗಿ ಕಾಣಿಸಿಕೊಳ್ಳುವ ಗರ್ಭಕಂಠ ಕ್ಯಾನ್ಸರ್ ತಡೆಗೆ ಹೆಚ್‌ಪಿವಿ ಲಸಿಕೆ ಸಹಕಾರಿಯಾಗಿದ್ದು, ಈ ಕುರಿತು ಸಮುದಾಯಗಳಲ್ಲಿ ಹೆಚ್ಚು ಅರಿವು ಮೂಡಿಸುವ ಕಾರ್ಯವಾಗಬೇಕು ಎಂದು ಅವರು ಅಭಿಪ್ರಾಯಪಟ್ಟರು.

ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ ಅವರು ಮಾತನಾಡಿ, ಈ ಲಸಿಕಾ ಅಭಿಯಾನ 90 ದಿನಗಳವರೆಗೆ ನಡೆಯಲಿದ್ದು, 14 ವರ್ಷದ ಎಲ್ಲಾ ಹೆಣ್ಣು ಮಕ್ಕಳು ಲಸಿಕೆ ಪಡೆಯಲು ಅರ್ಹರಿರುತ್ತಾರೆ. ಲಸಿಕೆ ಪಡೆಯುವುದರಿಂದ ಗರ್ಭಕಂಠದ ಕ್ಯಾನ್ಸರ್ ಅನ್ನು ಶೇ.99 ರಷ್ಟು ತಡೆಯಬಹುದು ಎಂದು ಹೇಳಿದರು.

ಲಸಿಕೆ ಪಡೆಯಲು ಬರುವ ಫಲಾನುಭವಿಗಳು ಖಡ್ಡಾಯವಾಗಿ ಪೋಷಕರನ್ನು ಜೊತೆಯಲ್ಲಿ ಕರೆದುಕೊಂಡು ಬರಬೇಕು. ಜೊತೆಗೆ ಸೂಕ್ತ ಗುರುತಿನ ಚೀಟಿ (ಜನನ ಪ್ರಮಾಣ ಪತ್ರ) ತೆಗೆದುಕೊಂಡು ಬರಬೇಕು. ಮುಖ್ಯವಾಗಿ ಊಟ ಸೇವನೆ ಮಾಡಿರಬೇಕು. ಕ್ಯಾನ್ಸರ್ ಮುಕ್ತ ನಾಳೆಗಾಗಿ ಲಸಿಕೆಯ ಸುರಕ್ಷೆ ಹೊಂದಬೇಕು ಎಂದು ತಿಳಿಸಿದರು.

ಇದೇ ವೇಳೆ ಗಣ್ಯರು ಸಾಂಕೇತಿಕವಾಗಿ 14 ವರ್ಷದ ಹೆಣ್ಣು ಮಕ್ಕಳಿಗೆ ಹೆಚ್‌ಪಿವಿ ಲಸಿಕೆ ನೀಡಿದರು. ಬಳಿಕ ಲಸಿಕೆ ಪಡೆದ ಪ್ರಮಾಣ ಪತ್ರ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಹನುಮಂತಪ್ಪ, ನಮ್ಮ ಕ್ಲಿನಿಕ್ ವೈದ್ಯಾಧಿಕಾರಿ ಡಾ.ಸಾತ್ವಿಕ್, ಫ್ಯಾಮಿಲಿ ಪ್ಲಾನಿಂಗ್ ಅಸೋಸಿಯೇಷನ್ ಸಂಸ್ಥೆಯ ವಿಜಯಲಕ್ಷ್ಮಿ, ನರ್ಸಿಂಗ್ ಅಧೀಕ್ಷಕಿ ವಿಮಲ, ಪ್ರಭಾರಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಷಿದ್ ಬೇಗಮ್, ಶಾರದ ವಿದ್ಯಾಪೀಠ ಮುಖ್ಯಗುರುಗಳಾದ ಕವಿತ ವಾದಿರಾಜ, ಡಿಎನ್‌ಓ ಗಿರೀಶ್, ಮನೋಹರ್ ಸೇರಿದಂತೆ ನರ್ಸಿಂಗ್ ಅಧಿಕಾರಿಗಳು, ಪೋಷಕರು ಹಾಗೂ ಶಾಲಾ ವಿದ್ಯಾರ್ಥಿಗಳು ಇದ್ದರು.

ಒಂದನೇಯ ಪುಟದಿಂದ

ಶಿವನಗೌಡ ನಾಯಕ ವಿರುದ್ದ ದೂರು : ಕ್ರಮ ಕೈಗೊಳ್ಳದಿದ್ದರೆ ಉಗ್ರ ಹೋರಾಟದ ಎಚ್ಚರಿಕೆ

ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಉಗ್ರ ಹೋರಾಟ ಹಮ್ಮಿಕೊಳ್ಳ ಲಾಗುವುದು ಎಂದು ಎಚ್ಚರಿಕೆ ನೀಡಿದರು. ಸುದ್ದಿಗೋಷ್ಠಿಯಲ್ಲಿ ಎಂ. ವಸಂತ್, ವಿಜಯ ಪ್ರಸಾದ್, ತಮ್ಮಣ್ಣ (ವಕೀಲರು), ಬಾಬು ಬಾಜಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಸರಕಾರಿ ಶಾಲೆ ಉಳಿಸುವಂತೆ ಎಐಡಿಎಸ್‌ಓ ಅಭಿಯಾನ, ಪೋಸ್ಟರ್ ಬಿಡುಗಡೆ

ಘೋಷಣೆ ಮಾಡಿದ್ದು, ಕಲ್ಯಾಣ ಕರ್ನಾಟಕದಲ್ಲಿ ಈ ಶಾಲೆಗಳನ್ನು ಸ್ಥಾಪಿಸಲು ಕೆಕೆಆರ್‌ಡಿಬಿ ನಿಧಿಯನ್ನು ಬಳಸುವುದಾಗಿ ತಿಳಿಸಿದ್ದಾರೆ. ಮೇಲ್ನೋಟಕ್ಕೆ ಹೊಸ ಶಾಲೆಗಳ ಸ್ಥಾಪನೆಗಾಗಿ ಈ ಹಣವನ್ನು ಬಳಸಲಾಗುತ್ತಿದೆ ಎಂದು ಬಿಂಬಿಸಲಾಗುತ್ತಿದೆ ಎಂದು ಅವರು ಹೇಳಿದರು.

ಆದರೆ 2025ರ ಅಕ್ಟೋಬರ್ 15ರಂದು ಸರ್ಕಾರ ಹೊರಡಿಸಿರುವ ಆದೇಶದ ಪ್ರಕಾರ ಗ್ರಾಮ ಪಂಚಾಯಿತಿಗೊಂದು ಕೆಪಿಎಸ್ ಶಾಲೆ ಸ್ಥಾಪಿಸಿ ಅದರ ಸುತ್ತಮುತ್ತ 3 ರಿಂದ 5 ಕಿ.ಮೀ ವ್ಯಾಪ್ತಿಯಲ್ಲಿರುವ ಶಾಲೆಗಳನ್ನು ಮುಚ್ಚುವ ಯೋಜನೆ ಇದೆ ಎಂದು ಅವರು ದೂರಿದರು. ಈ ಕ್ರಮದಿಂದ ಕೇವಲ ಸುಮಾರು 6 ಸಾವಿರ ಶಾಲೆಗಳನ್ನು ಉಳಿಸಿ 40 ಸಾವಿರಕ್ಕೂ ಹೆಚ್ಚು ಸರ್ಕಾರಿ ಶಾಲೆಗಳನ್ನು ಶಾಶ್ವತವಾಗಿ ಮುಚ್ಚುವ ಪರಿಸ್ಥಿತಿ ಉಂಟಾಗಬಹುದು ಎಂದು ಆರೋಪಿಸಿದರು.

ಪ್ರತಿಯೊಂದು ಮಗುವಿಗೂ ಉಚಿತ ಶಿಕ್ಷಣ ದೊರೆಯಬೇಕು ಎಂಬ ಜ್ಯೋತಿರಾವ್ ಫುಲೆ, ಸಾವಿತ್ರಿಬಾಯಿ ಫುಲೆ, ಈಶ್ವರಚಂದ್ರ ವಿದ್ಯಾಸಾಗರ್ ಮುಂತಾದ ಮಹಾನ್ ವ್ಯಕ್ತಿಗಳ ಆಶಯಗಳಿಗೆ ವಿರುದ್ದವಾಗಿ ಈ ನೀತಿ ಸಾಗುತ್ತಿದೆ ಎಂದು ಅವರು ಹೇಳಿದರು.

ಈ ಅನ್ಯಾಯದ ವಿರುದ್ಧ ಹಾಗೂ ಕೆಪಿಎಸ್ ಮ್ಯಾಗ್ನೆಟ್ ಯೋಜನೆ ವಿರೋಧಿಸಿ ರಾಜ್ಯದಾದ್ಯಂತ ಹೋರಾಟಗಳು ನಡೆಯುತ್ತಿವೆ. ಕಲ್ಯಾಣ ಕರ್ನಾಟಕದ ಬೀದ‌ರ್, ಕಲಬುರಗಿ, ಯಾದಗಿರಿ, ರಾಯಚೂರು, ವಿಜಯಪುರ, ಬಳ್ಳಾರಿ, ಕೊಪ್ಪಳ ಮತ್ತು ವಿಜಯನಗರ ಜಿಲ್ಲೆಗಳ ನೂರಾರು ಹಳ್ಳಿಗಳಲ್ಲಿ ಪ್ರತಿಭಟನೆಗಳು ನಡೆಯುತ್ತಿವೆ ಎಂದು ತಿಳಿಸಿದರು.

ಎಐಡಿಎಸ್‌ಓ ವಿದ್ಯಾರ್ಥಿ ಸಂಘಟನೆ ಹಾಗೂ ವಿವಿಧ ಜಿಲ್ಲೆಗಳ ಸಾರ್ವಜನಿಕ ಶಿಕ್ಷಣ ಉಳಿಸಿ ಸಮಿತಿಗಳ ನೇತೃತ್ವದಲ್ಲಿ ಮಾರ್ಚ್ 14ರಂದು ಕಲ್ಯಾಣ ಕರ್ನಾಟಕ ವಲಯ ಮಟ್ಟದ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ರಾಜ್ಯ ಕಾರ್ಯದರ್ಶಿ ಮಂಡಳಿ ಸದಸ್ಯ ಚಂದನ, ಯಶವಂತ, ನಂದಗೋಪಾಲ್, ಜಿಲ್ಲಾ ಘಟಕದ ಕಾರ್ಯದರ್ಶಿ ಬಸವರಾಜ, ವಿದ್ಯಾರ್ಥಿ ಸಂತೋಷ, ಸಮೀ‌ರ್, ರಾಘವೇಂದ್ರ ಪಾಲ್ಗೊಂಡಿದ್ದರು.

ರಾಯಚೂರಿನಲ್ಲಿ ರಾಜ್ಯ ವಕೀಲರ ಪರಿಷತ್ ಚುನಾವಣೆ ಬಿರುಸು 719 ಮತದಾರರಲ್ಲಿ 585 ಮತದಾನ : ಭದ್ರತೆಯ ಮಧ್ಯೆ ನ್ಯಾಯಾಲಯದಲ್ಲಿ ಮತದಾನ

ಚುನಾವಣೆಯನ್ನು ನಡೆಸಲಾಯಿತು. ಕಳೆದ ಹಲವು ದಿನಗಳಿಂದ ನಡೆದ ಪ್ರಚಾರದ ನಂತರ ಇಂದು ನಡೆದ ಮತದಾನದಲ್ಲಿ ವಕೀಲರು ಉತ್ಸಾಹದಿಂದ ಭಾಗವಹಿಸಿದರು.

ಜಿಲ್ಲೆಯಲ್ಲಿ ವೀರಭದ್ರ ಹಾಗೂ ರಾಘವೇಂದ್ರ ನಡುವಿನ ಸ್ಪರ್ಧೆ ತೀವ್ರವಾಗಿದ್ದು, ಮತದಾನ ಶಾಂತಿಯುತವಾಗಿ ನಡೆದಿದೆ ಎಂದು ಅಭ್ಯರ್ಥಿ ರಾಘವೇಂದ್ರ ಚುಡಾಮಣಿ ತಿಳಿಸಿದ್ದಾರೆ

ಎಸ್‌ಸಿ.ಎಸ್‌ಟಿ ಹೆಚ್ಚುವರಿ ಮೀಸಲಾತಿ ಕಾಯ್ದೆ 9ನೇ ಅನುಕ್ರಮಕ್ಕೆ ಸೇರಿಸಲು ಸಂಸದರ ಒತ್ತಾಯ ಕರ್ನಾಟಕ ಕಾಯ್ದೆ.2022 ಕುರಿತು ಕೇಂದ್ರಕ್ಕೆ ತುರ್ತು ಕ್ರಮಕ್ಕೆ ಮನವಿ : ಸಂಸದ ಜಿ.ಕುಮಾರ ನಾಯಕ

ಕೇಂದ್ರ ಗೃಹ ವ್ಯವಹಾರಗಳ ಸಚಿವಾ ಲಯಕ್ಕೆ ಈಗಾಗಲೇ ಕಳುಹಿಸಿದ್ದು, ನಂತರ ಅದನ್ನು ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯಕ್ಕೆ ರವಾನಿಸಲಾಗಿದೆ ಎಂದು ತಿಳಿಸಲಾಗಿದೆ.

ಕರ್ನಾಟಕದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಹೆಚ್ಚುವರಿ ಮೀಸಲಾತಿಯ ಬೇಡಿಕೆ ಹಲವು ದಶಕಗಳಿಂದ ಮುಂದುವರಿದಿದ್ದು, 1976ರ ಕೇಂದ್ರ ಕಾಯ್ದೆ ಜಾರಿಗೆ ಬಂದ ಬಳಿಕ ಹಲವು ಸಮುದಾಯಗಳಿಗೆ ಇದ್ದ ಭೌಗೋಳಿಕ ನಿರ್ಬಂಧಗಳನ್ನು ತೆಗೆದುಹಾಕಲಾಗಿದೆ. ಇದರಿಂದ ಈ ವರ್ಗಗಳ ಜನಸಂಖ್ಯೆ ಗಣನೀಯವಾಗಿ ಹೆಚ್ಚಾದರೂ ರಾಜ್ಯದಲ್ಲಿ ಮೀಸಲಾತಿಯ ಪ್ರಮಾಣವು 1958ರಿಂದ ಬದಲಾವಣೆಯಾಗಿಲ್ಲ ಎಂದು ಸಂಸದರು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ವಿಷಯಕ್ಕೆ ಆದ್ಯತೆ ನೀಡಿ ಸಂಸತ್ತಿನ ಪ್ರಸ್ತುತ ಬಜೆಟ್ ಅಧಿವೇಶನದಲ್ಲಿಯೇ ಈ ಪ್ರಸ್ತಾವನೆಯನ್ನು ಪರಿಗಣಿಸುವಂತೆ ಸಂಸದರು ಕೇಂದ್ರ ಸರ್ಕಾರವನ್ನು ಮನವಿ ಮಾಡಿದ್ದಾರೆ. ಈ ಕ್ರಮದಿಂದ ಕರ್ನಾಟಕದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮುದಾಯಗಳಿಗೆ ಮಹತ್ತರ ಪ್ರಯೋಜನವಾಗಲಿದೆ ಎಂದು ತಿಳಿಸಿದ್ದಾರೆ.

ಪದವಿಪೂರ್ವ ಶಿಕ್ಷಣ ಇಲಾಖೆಯ ಆಡಳಿತ ವರ್ಗಾವಣೆ ಪ್ರಸ್ತಾವನೆ ಖಂಡನೆ : ಉಪನ್ಯಾಸಕರ ಸಂಘದಿಂದ ಮನವಿ

ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ವರ್ಗಾಯಿಸುವ ಪ್ರಸ್ತಾವನೆ ಜಾರಿಯಾದರೆ ಶಿಕ್ಷಣ ಇಲಾಖೆಯ ಸ್ವಾಯತ್ತತೆ ಹಾಗೂ ಆಡಳಿತ ವ್ಯವಸ್ಥೆಗೆ ಧಕ್ಕೆಯಾಗುವ ಸಾಧ್ಯತೆ ಇದೆ ಎಂದು ತಿಳಿಸಿದ್ದಾರೆ.

ಶಿಕ್ಷಣ ಇಲಾಖೆಗೆ ಸಂಬಂಧಿಸಿದ ಪ್ರಮುಖ ನಿರ್ಧಾರಗಳನ್ನು ಶಿಕ್ಷಣ ಇಲಾಖೆಯಲ್ಲಿಯೇ ತೆಗೆದುಕೊಳ್ಳುವುದು ಸೂಕ್ತ. ಆಡಳಿತಾತ್ಮಕ ನಿಯಂತ್ರಣವನ್ನು ಬೇರೆ ಇಲಾಖೆಗೆ ವರ್ಗಾಯಿಸುವುದು ಶಿಕ್ಷಣ ವ್ಯವಸ್ಥೆಯ ಕಾರ್ಯಕ್ಷಮತೆಯ ಮೇಲೆ ದುಷ್ಪರಿಣಾಮ ಬೀರುವ ಸಾಧ್ಯತೆ ಇದೆ ಎಂದು ಜಿಲ್ಲಾ ಉಪನ್ಯಾಸಕರ ಸಂಘದ ಅಧ್ಯಕ್ಷ ನರಸಪ್ಪ ಭಂಡಾರಿ ತಿಳಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಸರ್ಕಾರ ತಕ್ಷಣವೇ ಈ ಪ್ರಸ್ತಾವನೆಯನ್ನು ಹಿಂಪಡೆದು ಪದವಿಪೂರ್ವ ಶಿಕ್ಷಣ ಇಲಾಖೆಯ ಆಡಳಿತಾತ್ಮಕ ನಿಯಂತ್ರಣವನ್ನು ಹಳೆಯಂತೆಯೇ ಮುಂದುವರಿಸಬೇಕು ಎಂದು ಉಪನ್ಯಾಸಕರ ಸಂಘವು ಮನವಿಯಲ್ಲಿ ಒತ್ತಾಯಿಸಿದೆ.

ಈ ಸಂದರ್ಭದಲ್ಲಿ ಸಂಘದ ಕಾರ್ಯಾಧ್ಯಕ್ಷರಾದ ನರಸಪ್ಪ ಭಂಡಾರಿ , ಪ್ರಧಾನ ಕಾರ್ಯದರ್ಶಿಗಳಾದ ಶರಣಪ್ಪ ಪಾಟೀಲ್ , ಖಜಾಂಚಿ ನರಸಪ್ಪ ಐಲಿ , ಉಪನ್ಯಾಸಕರಾದ ಕುಟೆಂಪ್ಪ ಗೌರಿಪುರ , ವೀರೇಶ್ ಸೆರೆಗಾರ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಧೂಮಪಾನ ನಿಷೇಧಕ್ಕೆ ಜನರ ಸ್ವಯಂ ಜಾಗೃತಿ ಅತ್ಯಗತ್ಯ: ಸಂತೋಷ ಬಂಡೆ

ವಿಜಯಪುರ, ಮಾ. 12

ಧೂಮಪಾನವು ಗಂಭೀರ ವ್ಯಸನವಾಗಿದ್ದು, ಇದು ವ್ಯಕ್ತಿಯ ಆರೋಗ್ಯ, ಸುತ್ತಲಿನ ಪರಿಸರದ ಮೇಲೆ ಹಾನಿಕಾರಕ ಪರಿಣಾಮ ಬೀರುತ್ತದೆ. ಧೂಮಪಾನ ಎಂದರೆ ದೇಹತ್ಯಾಗ ಎಂದರಿತುಕೊಡು ಆರೋಗ್ಯಕರ ಜೀವನಕ್ಕಾಗಿ ಎಲ್ಲರೂ ಧೂಮಪಾನದಿಂದ ದೂರವಿರುವುದು ಅತ್ಯಗತ್ಯ ಎಂದು ಶಿಕ್ಷಕ ಸಂತೋಷ ಬಂಡೆ ಹೇಳಿದರು.

ಬುಧವಾರ ತಾಲೂಕಿನ ಹಿರೇರೂಗಿ ಗ್ರಾಮದ ಯುಬಿಎಸ್ ಶಾಲೆಯಲ್ಲಿ ಧೂಮಪಾನ ನಿಷೇಧ ದಿನದ ನಿಮಿತ್ತ ಹಮ್ಮಿಕೊಂಡ ಧೂಮಪಾನದ ದುಷ್ಪರಿಣಾಮ ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಧೂಮಪಾನವು ನಿಧಾನಗತಿಯ ವಿಷವಾಗಿದೆ. ಅದು ಶ್ವಾಸಕೋಶದ ಕ್ಯಾನ್ಸರ ಹೃದಯರಕ್ತನಾಳದ ಕಾಯಿಲೆ, ಪಾರ್ಶ್ವವಾಯು ಮತ್ತು ಉಸಿರಾಟದ ದೀರ್ಘಕಾಲದ ಸಮಸ್ಯೆಗಳಿಗೆ ಕಾರಣವಾಗಿದ್ದು, ಇದನ್ನು ತ್ಯಜಿಸಿ,ಉತ್ತಮ ಆರೋಗ್ಯ ಕಾಪಾಡಿಕೊಳ್ಳುವಲ್ಲಿ ಜನರ ಸ್ವಯಂ ಜಾಗೃತಿ ಅತ್ಯಗತ್ಯ ಎಂದು ಹೇಳಿದರು.

ಧೂಮಪಾನವು ಆರೋಗ್ಯಕ್ಕೆ ಮಾರಕ. 2022ರಲ್ಲಿ ಪ್ರಕಟವಾದ ವಿಶ್ವ ಆರೋಗ್ಯ ಸಂಸ್ಥೆಯ ವರದಿಯ ಪ್ರಕಾರ, ಸುಮಾರು 7 ಮಿಲಿಯನ್ ವ್ಯಕ್ತಿಗಳು ಜಾಗತಿಕವಾಗಿ ಧೂಮಪಾನದಿಂದ ಬಳಲುತ್ತಿದ್ದು, 1.2 ಮಿಲಿಯನ್ ಜನರು ಇತರರಿಂದ ಸೂಸುವ ಸಿಗರೇಟ್ ಹೊಗೆಯನ್ನು ಸೇವಿಸಿ, ಅನಾರೋಗ್ಯದಿಂದ ಬಳಲುತ್ತಿದ್ದಾರೆ ಎಂಬ ಅಂಕಿಅಶ ಮನುಕುಲದ ಆರೋಗ್ಯದ ಬದುಕಿಗೆ ಆತಂಕಕಾರಿ ಯಾಗಿದೆ ಎಂದು ಹೇಳಿದರು.

ಶಿಕ್ಷಕ ಎಸ್.ಎಸ್. ಅರಬ ಅಧ್ಯಕ್ಷತೆ ವಹಿಸಿ ಮಾತನಾಡಿ, ವಿಶ್ವದಾದ್ಯಂತ ಧೂಮಪಾನದಿಂದಾಗಿ ಲಕ್ಷಾಂತರ ಅಕಾಲಿಕ ಸಾವುಗಳು ಸಂಭವಿಸುತ್ತಿವೆ. ವ್ಯಕ್ತಿಯ ಆರೋಗ್ಯ, ಆರ್ಥಿಕ ಸ್ಥಿತಿ ಮತ್ತು ಮುಂದಿನ ಪೀಳಿಗೆಯ ಭವಿಷ್ಯಕ್ಕಾಗಿ ಧೂಮಪಾನ ನಿಷೇಧವನ್ನು ಕಟ್ಟುನಿಟ್ಟಾಗಿ ಪಾಲಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಮಾರ್ಚ್ 18 ರಿಂದ ಎಸ್.ಎಸ್.ಎಲ್.ಸಿ. ಪರೀಕ್ಷೆ-1:

ಕಟ್ಟೆಚ್ಚರ ವಹಿಸಿ, ಅಕ್ರಮಕ್ಕೆ ಅವಕಾಶ ಬೇಡ -ರಾಯಪ್ಪ ಹುಣಸಗಿ



ಕಲಬುರಗಿ,ಮಾ.12

ಪ್ರಸಕ್ತ 2025-26ನೇ ಶೈಕ್ಷಣಿಕ ಎಸ್.ಎಸ್.ಎಲ್.ಸಿ. ಪರೀಕ್ಷೆ-1 ಇದೇ ಮಾರ್ಚ್ 18 ರಿಂದ ಏಪ್ರಿಲ್ 2ರ ವರೆಗೆ ಕಲಬುರಗಿ ಜಿಲ್ಲೆಯ 141 ಪರೀಕ್ಷಾ ಕೇಂದ್ರಗಳಲ್ಲಿ ಜರುಗಲಿದ್ದು, ಪರೀಕ್ಷೆ ಮೇಲೆ ತೀವ್ರ ಕಟ್ಟೆಚ್ಚರ ವಹಿಸಬೇಕು. ಪರೀಕ್ಷೆ ಸುಸೂತ್ರವಾಗಿ ಮತ್ತು ಯಾವುದೇ ರೀತಿಯ ನಕಲು ಮತ್ತು ಚಟುವಟಿಕೆಗಳಿಗೆ ಮಾಡಲು ಅವಕಾಶ ನೀಡಬಾರದು ಎಂದು ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಖಡಕ್ ಸೂಚನೆ ನೀಡಿದರು.

ಮಂಗಳವಾರ ಇಲ್ಲಿನ ಡಿ.ಸಿ. ಕಚೇರಿ ಸಭಾಂಗಣದಲ್ಲಿ ಪರೀಕ್ಷಾ ಕೇಂದ್ರ ಮುಖ್ಯಸ್ಥರು, ಮಾರ್ಗಾಧಿಕಾರಿಗಳು, ವೀಕ್ಷಕರೊಂದಿಗೆ ಪೂರ್ವಸಿದ್ಧತಾ ಸಭೆ ನಡೆಸಿದ ಅವರು, ಜಿಲ್ಲೆಯಾದ್ಯಾಂತ ಒಟ್ಟು 51,744 ವಿದ್ಯಾರ್ಥಿಗಳು ಎಸ್.ಎಸ್.ಎಲ್.ಸಿ. ಪರೀಕ್ಷೆ-1 ಬರೆಯಲಿದ್ದಾರೆ. ಎಲ್ಲಿಯೆ ನಕಲು ಪ್ರಕರಣ ವರದಿಯಾದಲ್ಲಿ ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಪರೀಕ್ಷೆ ಸುಗಮವಾಗಿ ನಡೆಯುವ ಸಂಬಂಧ 141 ಪರೀಕ್ಷಾ ಕೇಂದ್ರಕ್ಕೆ ತಲಾ ಒಬ್ಬರಂತೆ ಸ್ಥಳೀಯ ಜಾಗೃತ ಸದಸ್ಯರನ್ನು ನೇಮಿಸಲಾಗಿದೆ. ಪ್ರಶ್ನೆ ಪತ್ರಿಕೆ ಸರಬರಾಜಿಗೆ 53 ಜನ ಅಧಿಕಾರಿಗಳನ್ನು ಮಾರ್ಗಾಧಿಕಾರಿ ಯನ್ನಾಗಿ ನೇಮಿಸಿದೆ. ಪರೀಕ್ಷೆ ಹಿನ್ನೆಲೆಯಲ್ಲಿ ಕೇಂದ್ರದ 200 ಮೀಟರ್ ಸುತ್ತ ನಿಷೇಧಾಜ್ಞೆ ಜಾರಿ ಮಾಡಲಾಗಿದೆ. ಝರಾಕ್ಸ್ -ಪುಸ್ತಕ ಅಂಗಡಿ ಮುಚ್ಚುವಂತೆ ಆದೇಶಿಸಲಾಗಿದೆ. ಒಟ್ಟಾರೆಯಾಗಿ ಪರೀಕ್ಷೆಯು ಸುಸೂತ್ರವಾಗಿ ನಡೆಯುವಂತೆ ಎಲ್ಲಾ ಪರೀಕ್ಷೆಗೆ ಸಂಬಂದಿಸಿದ ಅಧಿಕಾರಿ-ಸಿಬ್ಬಂದಿಗಳು ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕೆಂದರು.

ಪರೀಕ್ಷೆ ನಡೆಯುವ ಮುನ್ನವೆ ಪರೀಕ್ಷಾ ಕೇಂದ್ರದಲ್ಲಿ ಅಗತ್ಯ ಮೂಲಸೌಕರ್ಯಗಳಾದ ವಿದ್ಯುತ್, ಕುಡಿಯುವ ನೀರು, ಶೌಚಾಲಯ, ಆಸನದ ವ್ಯವಸ್ಥೆ ಇರುವುದನ್ನು ಕೇಂದ್ರದ ಮುಖ್ಯಸ್ಥರು ಖಾತ್ರಿಪಡಿಸಿಕೊಳ್ಳಬೇಕು. ಯಾವುದೇ ಕಾರಣಕ್ಕೂ ಮಕ್ಕಳು ನೆಲದ ಮೇಲೆ ಕುಳಿತು ಪರೀಕ್ಷೆ ಬರೆಯಬಾರದು. ಪ್ರತಿ ಪರೀಕ್ಷಾ ಕೇಂದ್ರದ ಪ್ರವೇಶ ದ್ವಾರದಲ್ಲಿ ತಪಾಸಣೆಗೆ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಬೇಕೆಂದು ಸೂಚಿಸಲಾಯಿತು.

ಸಿ.ಸಿ.ಟಿ.ವಿ., ವೆಬ್‌ಕಾಸ್ಟಿಂಗ್ ವ್ಯವಸ್ಥೆ: ಪರೀಕ್ಷೆ ಸುಸೂತ್ರವಾಗಿ ನಡೆಯುವ ನಿಟ್ಟಿನಲ್ಲಿ ಪರೀಕ್ಷಾ ಕೇಂದ್ರದಲ್ಲಿ ಮೊಬೈಲ್ ಸೇರಿದಂತೆ ಎಲ್ಲಾ ರೀತಿಯ ಎಲೆಕ್ಟ್ರಾನಿಕ್ ಸಾಧನಗಳ ಬಳಕೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಪ್ರತಿ ಕೇಂದ್ರವು ಸಿ.ಸಿ.ಟಿ.ವಿ ಕಣ್ಗಾವಲಿನಲ್ಲಿ ಪರೀಕ್ಷೆ ನಡೆಯಲಿದ್ದು, ವಿಶೇಷವಾಗಿ ಜಿಲ್ಲಾ ಕೇಂದ್ರದಿಂದ ವೆಬ್‌ಕಾಸ್ಟಿಂಗ್ ಮೂಲಕ ಪರೀಕ್ಷೆ ಮೇಲ್ವಿಚಾರಣೆ ಮಾಡಲಾಗುತ್ತಿದೆ. ಇದಕ್ಕಾಗಿ 25 ತಂಡಗಳನ್ನು ರಚಿಸಿ ಪರೀಕ್ಷಾ ಕೇಂದ್ರಗಳನ್ನು ಹಂಚಿಕೆ ಮಾಡಲಾಗಿದೆ ಎಂದು ಅಪರ ಜಿಲ್ಲಾಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ಹೆಚ್ಚುವರಿ ಎಸ್.ಪಿ.ಮಹೇಶ ಮೇಘಣ್ಣನವರ್, ಡಿ.ಸಿ.ಪಿ ಪ್ರವೀಣ ಎಚ್. ನಾಯಕ್, ಡಿ.ಡಿ.ಪಿ.ಐ. ಶಂಕ್ರಮ್ಮ ಡವಳಗಿ ಸೇರಿದಂತೆ ಇನ್ನಿತರ ಅಧಿಕಾರಿಗಳು, ಪರೀಕ್ಷಾ ಕೇಂದ್ರದ ಮುಖ್ಯಸ್ಥರು ಇದ್ದರು.

ಯುಗಾದಿ ಹಬ್ಬದ ಪ್ರಯುಕ್ತ ವಿಶೇಷ ಬಸ್‌ಗಳ ಕಾರ್ಯಾಚರಣೆ

ಕಲಬುರಗಿ,ಮಾ.12

ಯುಗಾದಿ ಹಬ್ಬದ ಪ್ರಯುಕ್ತ ಶ್ರೀಶೈಲಂನಲ್ಲಿ ಜರುಗಲಿರುವ ''ಶ್ರೀ ಮಲ್ಲಿಕಾರ್ಜುನ ಸ್ವಾಮಿ'' ರಥೋತ್ಸವವು ಇದೇ ಮಾರ್ಚ್ 15 ರಿಂದ 21ರವರೆಗೆ ಜರುಗಲಿದ್ದು, ಮಲ್ಲಿಕಾರ್ಜುನ ಸ್ವಾಮಿ ರಥೋತ್ಸವಕ್ಕೆ ಆಗಮಿಸುವ ಭಕ್ತಾದಿಗಳಿಗೆ ಕಲಬುರಗಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ವಿಭಾಗ-1ರ ವತಿಯಿಂದ ವಿಶೇಷ ಬಸ್ ಕಾರ್ಯಾಚರಣೆ ಮಾಡಲಾಗುತ್ತಿದೆ ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ವಿಭಾಗ-1ರ ವಿಭಾಗೀಯ ನಿಯಂತ್ರಣಾಧಿ ಕಾರಿಗಳು ತಿಳಿಸಿದ್ದಾರೆ.

ವಿಭಾಗದ ವ್ಯಾಪ್ತಿಗೆ ಬರುವ ಕಲಬುರಗಿ, ಚಿಂಚೋಳಿ, ಚಿತ್ತಾಪೂರ, ಕಾಳಗಿ ಮತ್ತು ಸೇಡಂ ಬಸ್ ನಿಲ್ದಾಣಗಳಿಂದ ಮತ್ತು ಇನ್ನಿತರ ಸ್ಥಳಗಳಿಂದ ಶ್ರೀಶೈಲಂಗೆ ವಿಶೇಷ ಬಸ್ಸುಗಳ ವ್ಯವಸ್ಥೆ ಕಲ್ಪಿಸಲಾಗಿರುತ್ತದೆ. ಈ ವಿಶೇಷ ವಾಹನಗಳ ಸೌಲಭ್ಯಕ್ಕಾಗಿ ಸಂಪರ್ಕಿಸಬೇಕಾದ ಘಟಕ ವ್ಯವಸ್ಥಾಪಕರ ದೂರವಾಣಿ ಸಂಖ್ಯೆ ವಿವರ ಇಂತಿದೆ.

ಕಲಬುರಗಿ ಘಟಕ-1ರ ಘಟಕ ವ್ಯವಸ್ಥಾಪಕರ ಮೊಬೈಲ್ ಸಂಖ್ಯೆ 7760992113, ಕಲಬುರಗಿ ಘಟಕ-4ರ ಘಟಕ ವ್ಯವಸ್ಥಾಪಕ-7022012103, ಚಿಂಚೋಳಿ ಘಟಕ'-7760992117, ಚಿತ್ತಾಪೂರ ಘಟಕ-77609 92119, ಕಾಳಗಿ ಘಟಕ-77609 92120 ಹಾಗೂ ಸೇಡಂ ಘಟಕ-7760992466. ಘಟಕಗಳ ವ್ಯಾಪ್ತಿಗೆ ಬರುವ ಬಸ್ ನಿಲ್ದಾಣ/ ಗ್ರಾಮಗಳಿಂದ 45 ರಿಂದ 50, ಪ್ರಯಾಣಿಕರಿದ್ದಲ್ಲಿ ನೇರವಾಗಿ ಬಸ್ ನಿಲ್ದಾಣ/ಗ್ರಾಮಗಳಿಂದಲೇ ಶ್ರೀಶೈಲಂಗೆ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗು ವುದು. ಸಾರ್ವಜನಿಕ ಪ್ರಯಾಣಿ ಕರು/ ಭಕ್ತಾದಿಗಳ ಸದರಿ ಸಾರಿಗೆಗಳ ಸದುಪಯೋಗವನ್ನು ಪಡೆಯಬೇಕೆಂದು ಅವರು ತಿಳಿಸಿದ್ದಾರೆ.

15 ರವರೆಗೆ ಅರ್ಜಿ ಸಲ್ಲಿಕೆ ಕೊನೆಯ ದಿನಾಂಕ ವಿಸ್ತರಣೆ

ಕಲಬುರಗಿ,ಮಾ.12- 2026ರ ಏ. 5ರಂದು ಡಾ. ಬಾಬು ಜಗಜೀವನರಾಂರವರ ಹಾಗೂ ಏ.14 ರಂದು ಡಾ. ಬಿ.ಆರ್.ಅಂಬೇಡ್ಕರ್‌ರವರ ಜನ್ಮ ದಿನಾಚರಣೆಯನ್ನು ರಾಜ್ಯ ಮಟ್ಟದಲ್ಲಿ ಸರ್ಕಾರದ ವತಿಯಿಂದ ಆಚರಿಸಲಾ ಗುತ್ತಿದೆ. ಈ ಸಂದರ್ಭದಲ್ಲಿ ಪರಿಶಿಷ್ಟ ಜಾತಿ/ ಪರಿಶಿಷ್ಟ ವರ್ಗದ ಜನಾಂಗ ದವರ ಶ್ರೇಯಸ್ಸಿಗಾಗಿ ಪ್ರೋತ್ಸಾಹಿಸಿ, ಶ್ರಮಿಸಿ ಗಣನಿಯ ಸೇವೆ ಸಲ್ಲಿಸಿದ ಅರ್ಹ ವ್ಯಕ್ತಿಗಳನ್ನು ಗುರುತಿಸಿ 2026-27ನೇ ಸಾಲಿನ ಡಾ. ಬಾಬು ಜಗಜೀವ ನರಾಂರವರ ಹಾಗೂ ಡಾ. ಬಿ.ಆರ್. ಅಂಬೇಡ್ಕ ರ್‌ರವರ ಪ್ರಶಸ್ತಿಗಳನ್ನು ನೀಡಿ ಗೌರವಿಸಲಾಗು ತ್ತಿದೆ. ಇದಕ್ಕಾಗಿ ಅರ್ಹ ವ್ಯಕ್ತಿಗಳಿಂದ ಅರ್ಜಿ ಸಲ್ಲಿಕೆ ಕೊನೆಯ ದಿನಾಂಕವನ್ನು 2026ರ ಮಾರ್ಚ್ 15 ರವರೆಗೆ ವಿಸ್ತರಿಸಲಾ ಗಿದೆ ಎಂದು ಕಲಬುರಗಿ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

ಗೋಡಂಬಿ ಬೆಳೆಯನ್ನು ಕೆಂಪು ಮಣ್ಣಿನಲ್ಲಿ ಮತ್ತು ಬಂಜರು ಭೂಮಿಯಲ್ಲಿ ಬೆಳೆಯಲು ರೈತರಿಗೆ ಸಲಹೆ



ಬೀದರ, ಮಾ.12

ಬಂಗಾರದ ಬೆಳೆ ಎಂದೇ ಕರೆಯಲ್ಪಡುವ ಗೋಡಂಬಿ ಬೆಳೆಯನ್ನು ರೈತರು ಕಪ್ಪು ಮಣ್ಣಿನಲ್ಲಿ ಬೆಳೆಯದೆ, ಕೆಂಪು ಮಣ್ಣಿನಲ್ಲಿ ಮತ್ತು ಬಂಜರು ಭೂಮಿಯಲ್ಲಿ ಮಾತ್ರ ಬೆಳೆಯಬೇಕು. ಇದನ್ನು ಬೆಳೆಯಲು ತೋಟಗಾರಿಕೆ ಇಲಾಖೆಯ ಸಹಾಯ ಸಹಕಾರ ಮತ್ತು ತೋಟಗಾರಿಕೆ ವಿಜ್ಞಾನಿಗಳ ತಾಂತ್ರಿಕ ಸಲಹೆ ಪಡೆದು ಹೆಚ್ಚಿನ ಲಾಭ ಪಡೆಯಬೇಕೆಂದು ಬೀದರ ತೋಟಗಾರಿಕಾ ಕಾಲೇಜಿನ ಡೀನ್ ಡಾ.ಎಸ್.ವಿ.ಪಾಟೀಲ್ ಹೇಳಿದರು.

ಅವರು ಬುಧವಾರ ಬೀದರ ತಾಲೂಕಿನ ಕಮಠಾಣಾ ಗ್ರಾಮದ ನಾಗನಾಥರಾವ ನಿಡೋದೆ ಅವರ ಗೋಡಂಬಿ ಹೊಲದಲ್ಲಿ ಸಮಗ್ರ ತೋಟಗಾರಿಕೆ ಅಭಿವೃದ್ಧಿ ಮಿಷನ್ ಅಡಿಯಲ್ಲಿ ಗೋಡಂಬಿ ಬೆಳೆಯ ಮೇಲೆ ರೈತರಿಗಾಗಿ ಆಯೋಜಿಸಿದ ಒಂದು ದಿನದ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ರೈತರು ಶ್ರಮ ಜೀವಿಗಳಾಗಿ ನೈಸರ್ಗಿಕ ಬದುಕನ್ನು ಕಟ್ಟಿಕೊಳ್ಳಬೇಕು. ಗಂಡು ಹೆಣ್ಣು ಎಂಬ ಭೇದ ಭಾವ ಮಾಡದೆ ಎಲ್ಲರೂ ಮೈಮುರಿದು ದುಡಿದು ಸ್ವಾವಲಂಬಿಗಳಾಗಬೇಕೆಂದರು.

ಕಳೆದ 14 ವರ್ಷಗಳಿಂದ ಮೂರು ಎಕರೆ ಪ್ರದೇಶದಲ್ಲಿ ಗೋಡಂಬಿ ಬೆಳೆಯನ್ನು ಯಶಸ್ವಿಯಾಗಿ ಬೆಳೆದು ವಾರ್ಷಿಕ 2.50 ಲಕ್ಷ ರೂಪಾಯಿಗೂ ಅಧಿಕ ಲಾಭ ಪಡೆಯುತ್ತಿರುವ ನಾಗನಾಥರಾವ ನಿಡೋದೆ ಮಾತನಾಡಿ, ಗೋಡಂಬಿ ಬೆಳೆಯನ್ನು ಬೆಳೆಯಲು ರೈತರಿಗೆ ಸ್ವಲ್ಪ ಆರ್ಥಿಕ ಸಹಾಯ ನೀಡುವ ಯಾವುದಾದರೂ ಒಂದು ಯೋಜನೆಯನ್ನು ಜಾರಿಗೊಳಿಸಿ ಎಂದು ಮನವಿ ಮಾಡಿದರು. ಮೂರ್ನಾಲ್ಕು ವರ್ಷ ರೈತರು ಗೋಡಂಬಿ ಬೆಳೆಯಲು ಶ್ರಮಿಸಿದರೆ ನಂತರ ಪ್ರತಿ ವರ್ಷ ನಿರಂತರ ಆದಾಯ ಪಡೆಯಬಹುದು ಎಂದು ಹೇಳಿದರು. ಬಾಗಲಕೋಟೆ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರ ತೋಟಗಾರಿಕೆ ಕಾಲೇಜು ಮತ್ತು ಕೊಚ್ಚಿಯ ಗೋಡಂಬಿ ಮತ್ತು ಕೋಕೋ ಅಭಿವೃದ್ಧಿ ನಿರ್ದೇಶನಾಲಯದ ಸಹಯೋಗದಲ್ಲಿ ಆಯೋಜಿಸಿದ ಈ ಕಾರ್ಯಕ್ರಮದಲ್ಲಿ ತೋಟಗಾರಿಕೆ ಕಾಲೇಜಿನ ಡಾ.ಮಹ್ಮದ್ ಫಾರೂಕ್, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಕುಶಾಲರಾವ ಮುಖ್ಯ ಅತಿಥಿಗಳಾಗಿದ್ದರು.

ತೋಟಗಾರಿಕೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕರುಗಳಾದ ಡಾ.ವಿ.ಪಿ.ಸಿಂಗ್ ಗೋಡಂಬಿ ಉತ್ಪಾದನೆಯಲ್ಲಿ ತಾಂತ್ರಿಕತೆ, ಡಾ.ಅಬ್ದುಲ್ ಕರೀಂ ಎಂ. ಗೋಡಂಬಿ ಬೆಳೆಯ ರೋಗ ನಿರ್ವಹಣೆ, ಡಾ. ರಾಜಕುಮಾರ ಎಂ. ಗೋಡಂಬಿ ಬೆಳೆಯ ಕೀಟ ನಿರ್ವಹಣೆ ಮತ್ತು ಡಾ. ಹರೀಶ ಟಿ. ಗೋಡಂಬಿ ಸುಗ್ಗಿಯ ನಂತರದ ಸಂಸ್ಕರಣೆ ಮತ್ತು ಮೌಲ್ಯವರ್ಧಿತ ಉತ್ಪನ್ನಗಳು ಕುರಿತು ರೈತರಿಗೆ ತಾಂತ್ರಿಕ ಸಲಹೆ ಮತ್ತು ಮಾರ್ಗದರ್ಶನ ನೀಡಿದರು. ತೋಟಗಾರಿಕೆ ಕಾಲೇಜಿನ ವಿಜಯ ಮಹಾಂತೇಶ ಕಾರ್ಯಕ್ರಮ ನಿರೂಪಿಸಿದರು. ಈ ತರಬೇತಿ ಕಾರ್ಯಕ್ರಮದಲ್ಲಿ ಸುಮಾರು 50 ರೈತರು ಪಾಲ್ಗೊಂಡಿದ್ದರು.

ನೀತಿ ಆಯೋಗದಿಂದ ಪ್ರಾದೇಶಿಕ ಉತ್ತಮ ಅಭ್ಯಾಸಗಳ ಕಾರ್ಯಾಗಾರ:

ಪ್ರಸವ ಪೂರ್ವ ನೋಂದಣಿ ಮತ್ತು ಶೇ.100ರಷ್ಟು ಸಾಂಸ್ಥಿಕ ಹೆರಿಗೆ ಕಲಬುರಗಿ ಜಿಲ್ಲಾಡಳಿತ ಕಾರ್ಯಕ್ಕೆ ಆಯೋಗ ಮೆಚ್ಚುಗೆ



ಕಲಬುರಗಿ,ಮಾ.12

ನೀತಿ ಆಯೋಗದಿಂದ ಆಂಧ್ರಪ್ರದೇಶದ ವಿಶಾಕಪಟ್ಟಣಂ ಸೋಮವಾರ ಜರುಗಿದ ಪ್ರಾದೇಶಿಕ ಕಾರ್ಯಾಗಾರದಲ್ಲಿ ಕಲಬುರಗಿ ಜಿಲ್ಲೆಯ ಮಹತ್ವಕಾಂಕ್ಷೆ ತಾಲೂಕಿನಲ್ಲಿ ಪ್ರಸವ ಪೂರ್ವ ನೋಂದಣಿ ಮತ್ತು ಸಾಂಸ್ಥಿಕ ಹೆರಿಗೆಯಲ್ಲಿ ಶೇ.100ರಷ್ಟು ಪ್ರಗತಿ ಸಾಧಿಸಿರುವುದಕ್ಕೆ ಕಲಬುರಗಿ ಜಿಲ್ಲಾಡಳಿತ ಕಾರ್ಯಕ್ಕೆ ನೀತಿ ಆಯೋಗವು ಮೆಚ್ಚುಗೆ ವ್ಯಕ್ತಪಡಿಸಿದೆ.

ಸೋಮವಾರ ಆಂಧ್ರಪ್ರದೇಶದ ವಿಶಾಕಪಟ್ಟಣಂನ ಎ1 ಗ್ರ್ಯಾಂಡ್ ಕನ್ವೆನ್ಷನಲ್ ಸೆಂಟರ್‌ನಲ್ಲಿ ನೀತಿ ಆಯೋಗದಿಂದ ಆಯೋಜಿಸಿದ ಬದಲಾವಣೆಯ ದಕ್ಷಿಣ ವೇಗವರ್ಧಕಗಳು ಎಂಬ ಘೋಷವಾಕ್ಯದ ಮಹತ್ವಾಕಾಂಕ್ಷೆಯ ಜಿಲ್ಲೆಗಳಲ್ಲಿ ನಾವೀನ್ಯತೆಗಳು ಮತ್ತು ಉತ್ತಮ ಅಭ್ಯಾಸಗಳು ಕುರಿತ ಕಾರ್ಯಾಗಾರ ನಡೆಯಿತ್ತು.

ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ಭಾಗವಹಿಸಿ, ಜಿಲ್ಲೆಯ ಕಾಳಗಿ, ಅಫಜಲಪೂರ ಹಾಗೂ ಶಹಾಬಾದ ಬ್ಲಾಕ್‌ಗಳಲ್ಲಿ ಗರ್ಭಧಾರಣೆ ಕಂಡಬಂದ ನಂತರ ಮೊದಲನೇ ತ್ರೈಮಾಸಿಕ ಅವಧಿಯಲ್ಲಿಯೇ ಪ್ರಸವ ಪೂರ್ವ ನೋಂದಣಿ ಮಾಡಿ ಆರೋಗ್ಯ ಸುಧಾರಣೆ ನಿಟ್ಟಿನಲ್ಲಿ ಪೌಷ್ಟಿಕ ಆಹಾರ ನೀಡುವುದರ ಜೊತೆಗೆ ಶೇ.100 ರಷ್ಟು ಸಾಂಸ್ಥಿಕ ಹೆರಿಗೆ ಮಾಡಿಸಲಾಗುತ್ತಿದೆ ಎಂದು ಪ್ರಾತ್ಯಕ್ಷಿಕೆ ಮೂಲಕ ಜಿಲ್ಲೆಯ ಉತ್ತಮ ಅಭ್ಯಾಸಗಳ ಕುರಿತು ಮಂಡಿಸಿದರು.

ಜಿಲ್ಲೆಯ ಈ ಉತ್ತಮ ಅಭ್ಯಾಸಕ್ಕೆ ನೀತಿ ಆಯೋಗದ ಹೆಚ್ಚುವರಿ ಕಾರ್ಯದರ್ಶಿ ರೋಹಿತ್ ಕುಮಾರ ಅವರು ಶ್ಲಾಘಿಸಿದಲ್ಲದೆ ಇದನ್ನು ಪುನರಾವರ್ತಿಸಬಹುದಾದ ಮಾದರಿ ಎಂದು ಮೆಚ್ಚುಗೆಯ ಮಾತುಗಳನ್ನಾಡಿದರು.

ನೆರೆಯ ಬೀದರ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಸೇರಿದಂತೆ ಆಂಧ್ರ ಪ್ರದೇಶ, ಕೇರಳ, ತಮಿಳನಾಡು, ತೆಲಂಗಾಣ ಹಾಗೂ ಅಂಡಾಮಾನ್ ನಿಕೋಬರ್ ಕೇಂದ್ರಾಡಳಿತ ಪ್ರದೇಶದ ಜಿಲ್ಲಾಧಿಕಾರಿಗಳು ಇದರಲ್ಲಿ ಭಾಗವಹಿಸಿದ್ದರು.

ನೀತಿ ಆಯೋಗದಿಂದ ಗುರುತಿಸಲ್ಪಟ್ಟ ಜಿಲ್ಲೆಯ ಮಹತ್ವಕಾಂಕ್ಷೆಯ ತಾಲೂಕುಗಳಾದ ಅಫಜಲಪೂರ, ಶಹಾಬಾದ ಹಾಗೂ ಕಾಳಗಿ ಬ್ಲಾಕ್‌ಗಳಲ್ಲಿ ಸುಸ್ಥಿರ ಪ್ರಗತಿ ಸಾಧಿಸಲು ನವೀನ ಆಡಳಿತ ಮತ್ತು ಅಭಿವೃದ್ಧಿ ಉಪಕ್ರಮಗಳನ್ನು ಜಾರಿಗೊಳಿಸಿದ್ದಕ್ಕಾಗಿ ಕಲಬುರಗಿ ಜಿಲ್ಲಾಡಳಿತ ಕಾರ್ಯಕ್ಕೆ ಕಳೆದ 2025ರ ನವೆಂಬರ್ ನಲ್ಲಿ ನೀತಿ ಆಯೋಗವು ಪ್ರಶಂಸನೆ ವ್ಯಕ್ತಪಡಿಸಿತ್ತು.

ಇದಲ್ಲದೆ ಶಿಕ್ಷಣ, ಆರೋಗ್ಯ, ಕೌಶಲ್ಯ, ಕೃಷಿ ಸೇರಿದಂತೆ ಜನರ ಜೀವನ ಮಟ್ಟದ ಸುಧಾರಣೆ ನಿಟ್ಟಿನಲ್ಲಿ ಮಹತ್ವಾಕಾಂಕ್ಷೆಯ ತಾಲೂಕಿನಲ್ಲಿ ಉತ್ತಮವಾಗಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿರುವ ಕಾರಣಕ್ಕೆ ಕಳೆದ ಆಗಸ್ಟ್-2024ರಲ್ಲಿ ನೀತಿ ಆಯೋಗವು ಘೋಷಿಸಿದ ಡೆಲ್ಟಾ ರ್‍ಯಾಂಕ್-2024ರಲ್ಲಿ ದಕ್ಷಿಣ ಭಾರತ ವಲಯದಡಿ ಜಿಲ್ಲೆಯ ಕಾಳಗಿ ತಾಲೂಕು ಎರಡನೇ ರ್‍ಯಾಂಕ್ ಪಡೆದಿರುವುದನ್ನು ಇಲ್ಲಿ ಸ್ಮರಿಸಬಹುದಾಗಿದೆ.

ಕೃಷ್ಣಾ ಮೇಲ್ದಂಡೆ ಯೋಜನೆಗೆ ಆಂಧ್ರಪ್ರದೇಶ ಆಕ್ಷೇಪ, ದೆಹಲಿಗೆ ತೆರಳಿ ಸಂಸದರ ಜೊತೆ ಚರ್ಚೆ: ಡಿ.ಕೆ.ಶಿ

ಬೆಂಗಳೂರು: ಕೃಷ್ಣಾ ಮೇಲ್ದಂಡೆ ಯೋಜನೆ ವಿಚಾರದಲ್ಲಿ ಭೂಸ್ವಾಧೀನ ಪ್ರಕ್ರಿಯೆ ಮಾಡಬಾರದು, ಪರಿಹಾರ ನೀಡಬಾರದು ಎಂದು ಕೇಂದ್ರ ಸರ್ಕಾರಕ್ಕೆ ಆಂಧ್ರಪ್ರದೇಶ ಆಕ್ಷೇಪಣೆ ಸಲ್ಲಿಸಿದೆ. ಆದರೂ ಬಿಜೆಪಿ ನಾಯಕರು ಈ ಬಗ್ಗೆ ಧ್ವನಿ ಎತ್ತುತ್ತಿಲ್ಲ. ನಾನು, ಹೆಚ್.ಕೆ ಪಾಟೀಲ್ ಹಾಗೂ ಎಂ.ಬಿ ಪಾಟೀಲ್ ಅವರು ಮಂಗಳವಾರ ದೆಹಲಿಗೆ ಹೋಗುತ್ತಿದ್ದು, ಎಲ್ಲಾ ಸಂಸದರನ್ನು ಭೇಟಿ ಮಾಡಿ ನಮ್ಮ ರಾಜ್ಯದ ವಿಚಾರಗಳನ್ನು ಪ್ರಸ್ತಾಪಿಸುತ್ತೇವೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

ವಿಧಾನಪರಿಷತ್ತಿನಲ್ಲಿ ನಿಯಮ 330 ಅಡಿ ನಡೆದ ಚರ್ಚೆ ವೇಳೆ ಹನುಮಂತ ರುದ್ರಪ್ಪ ನಿರಾಣಿ ಅವರು ಕೃಷ್ಣಾ ಮೇಲ್ದಂಡೆ ಯೋಜನೆಯಡಿ ಮುಳುಗಡೆಯಾಗುವ 20 ಗ್ರಾಮಗಳ ಪುನರ್ ವಸತಿ ವಿಚಾರವಾಗಿ ಪ್ರಸ್ತಾಪಿಸಿದರು. ಇದಕ್ಕೆ ಪ್ರತಿಕ್ರಿಯೆ ನೀಡಿದ ಶಿವಕುಮಾರ್ ಅವರು, ''ಈ ಯೋಜನೆಯ ಭೂ ಸಂತ್ರಸ್ತ ರೈತರಿಗೆ ಪರಿಹಾರ ನೀಡುವ ಬಗ್ಗೆ ಸರ್ಕಾರ ಈಗಾಗಲೇ ತೀರ್ಮಾನ ಮಾಡಿದ್ದು, ಪುನರ್ವಸತಿ ಕಾರ್ಯವನ್ನು ಬಾಕಿ ಉಳಿಸಿದ್ದೇವೆ. ಈ ಯೋಜನೆಗೆ ಕೇಂದ್ರ ಸರ್ಕಾರ ಅಧಿಸೂಚನೆ ಹೊರಡಿಸಲಿ, ನ್ಯಾಯಬದ್ಧವಾಗಿ ಸಂತ್ರಸ್ತರಿಗೆ ಪರಿಹಾರ ನೀಡಲಾಗುವುದು ಎಂದು ಉತ್ತರಿಸಿದರು.

ಮುಳುಗಡೆಯಾಗುವ ಗ್ರಾಮಗಳ ವಿಚಾರದಲ್ಲಿ ಸರ್ಕಾರ ಗೊಂದಲದಲ್ಲಿದೆ. ಏಕೆಂದರೆ, ಈ ಪ್ರದೇಶದಲ್ಲಿ ಜಮೀನು ಕಳೆದುಕೊಂಡವರು ಕೋರ್ಟ್‌ಗೆ ಹೋಗಿ, ಎಕರೆಗೆ 13-14 ಕೋಟಿ ಪರಿಹಾರ ನೀಡಬೇಕು ಎಂದು ಆದೇಶ ತಂದರು. ನಾವು ಅವರಿಗೆ ಅಷ್ಟು ಪರಿಹಾರ ನೀಡಿ, ನಂತರ ಪುನರ್ವಸತಿ ಕಲ್ಪಿಸುವುದು ಗೊಂದಲಮಯವಾಗಿದೆ. ಹೀಗಾಗಿ ನಾವು ಪರಿಹಾರ ನೀಡುವುದರ ಜತೆಗೆ ಪುನರ್ವಸತಿ ಬದಲು ಹಣವನ್ನೇ ನೀಡುವ ಬಗ್ಗೆ ಚಿಂತನೆ ಮಾಡಲಾಗುತ್ತಿದೆ. ಈ ವಿಚಾರವಾಗಿ ನಿಮ್ಮ ಜತೆಗೂ ಚರ್ಚೆ ಮಾಡಲಾಗುವುದು. ಇಲ್ಲಿ ಜಮೀನು ಖರೀದಿ ಮಾಡುವುದು ಹಗರಣವಾಗುವುದಕ್ಕೆ ಅವಕಾಶ ನೀಡಬಾರದು ಎಂದು ಆಲೋಚಿಸಲಾಗುತ್ತಿದೆ. ಈ ಮಧ್ಯೆ ಆಂಧ್ರಪ್ರದೇಶದವರು ಕೇಂದ್ರ ಸರ್ಕಾರಕ್ಕೆ ಪತ್ರ ಬರೆದು ಭೂಸ್ವಾಧೀನ ಪ್ರಕ್ರಿಯೆ ಮಾಡಬಾರದು, ಪರಿಹಾರ ನೀಡಬಾರದು ಎಂದು ಆಕ್ಷೇಪಣೆ ಹಾಕಿದ್ದಾರೆ. ನಿಮ್ಮೆಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಈ ವಿಚಾರವಾಗಿ ಪರಿಹಾರ ಕಂಡುಕೊಳ್ಳಲಾಗುವುದು ಎಂದು ತಿಳಿಸಿದರು.

ರಾಜ್ಯದ ಹಿತದೃಷ್ಟಿಯಿಂದ ನ್ಯಾಯಾಲಯದಲ್ಲಿ 2 ಐತಿಹಾಸಿಕ ತೀರ್ಪು: ಪ್ರಶೋತ್ತರ ವೇಳೆಯಲ್ಲಿ ಕಾಂಗ್ರೆಸ್ ಸದಸ್ಯರಾದ ತಿಪ್ಪಣಪ್ಪಕಮಕನೂರು ಅವರು ನ್ಯಾಯಾಲಯದ ತೀರ್ಪಿನಿಂದ ಸರ್ಕಾರಕ್ಕೆ ಸುಮಾರು 10 ಸಾವಿರ ಕೋಟಿ ರೂ. ಉಳಿತಾಯವಾಗಿದ್ದು, ಇದನ್ನು ಎತ್ತಿನಹೊಳೆ, ಕೃಷ್ಣಾ ಮೇಲ್ದಂಡೆ ಯೋಜನೆಗೆ ವಿನಿಯೋಗಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ಎಂದು ಕೇಳಿದರು.



ಇದಕ್ಕೆ ಉತ್ತರಿಸಿದ ಡಿಕೆಶಿ, ಈ ಅವಧಿಯಲ್ಲಿ ನಾನು ನೀರಾವರಿ ಸಚಿವನಾದ ಬಳಿಕ ರಾಜ್ಯದ ಹಿತದೃಷ್ಟಿಯಿಂದ ನ್ಯಾಯಾಲಯದಲ್ಲಿ ಎರಡು ಪ್ರಮುಖ ತೀರ್ಪುಗಳು ಸಿಕ್ಕಿವೆ. ನಮ್ಮ ಒತ್ತಡ ಹಾಗೂ ತಂತ್ರಗಾರಿಕೆ ಮೇಲೆ ಮೇಕೆದಾಟು ಯೋಜನೆ ವಿಚಾರವಾಗಿ ಕೇಂದ್ರ ಸರ್ಕಾರ ಪರಿಶೀಲನೆ ಮಾಡಿ ತೀರ್ಮಾನ ಮಾಡಬೇಕು ಎಂದು ತೀರ್ಪು ನೀಡಿದೆ. ತಮಿಳುನಾಡಿಗೆ 177 ಟಿಎಂಸಿ ನೀರು ನೀಡಬೇಕು ಎಂದು ಹೇಳಿರುವುದು ನಮ್ಮ ದೊಡ್ಡ ಸಾಧನೆ. ಇನ್ನು ಭೂ ಪರಿಹಾರ ವಿಚಾರವಾಗಿ ಸಿಕ್ಕಿರುವ ತೀರ್ಪು ಎರಡನೆಯದು. ಈ ಎರಡು ತೀರ್ಪು ನೀಡಿರುವ ಸುಪ್ರೀಂ ಕೋರ್ಟಿಗೆ ಇಲ್ಲಿಂದಲೇ ನಮ್ಮ ಸರ್ಕಾರ ತಲೆಬಾಗುತ್ತದೆ. 20 ಸಾವಿರಕ್ಕೂ ಹೆಚ್ಚು ಪ್ರಕರಣಗಳು ಸುಪ್ರೀಂ ಕೋರ್ಟ್ ಮೆಟ್ಟಿಲೇರುವ ಸಂದರ್ಭವಿತ್ತು. ನಮ್ಮ ನಾಯಕರ ಒತ್ತಡದ ಮೇರೆಗೆ ನಮ್ಮ ಸರ್ಕಾರ ಭೂಸಂತ್ರಸ್ತರಿಗೆ 35-40 ಲಕ್ಷ ಪ್ರತಿ ಎಕರೆಗೆ ಪರಿಹಾರ ನಿಗದಿಪಡಿಸಿದೆ. ಅನೇಕ ಪ್ರಕರಣಗಳಲ್ಲಿ ವಕೀಲರು, ಅಧಿಕಾರಿಗಳು ಒಳ ಒಪ್ಪಂದ ಮಾಡಿಕೊಂಡು ಪ್ರಕರಣ ದಾಖಲಿಸಿ ಕೋಟಿಗಟ್ಟಲೆ ಹಣ ನೀಡುವಂತೆ ಆದೇಶ ತಂದಿದ್ದರು. ಆದರೆ ಸುಪ್ರೀಂ ಕೋರ್ಟ್ ಇಡೀ ದೇಶಕ್ಕೆ ತೀರ್ಪು ನೀಡಿದೆ. 120 ದಿನಗಳ ನಂತರ ಎಂಎಫ್‌ಎ ವಾಪಸ್ ಕಳುಹಿಸಿದೆ. ಇದರಿಂದ ಕೆಎನ್‌ಎನ್‌ಎಲ್‌ನಲ್ಲಿ 900 ಪ್ರಕರಣ, ಕೆಬಿಜೆಎನ್‌ಎಲ್‌ನಲ್ಲಿ 380 ಪ್ರಕರಣಗಳು ಒಂದೇ ದಿನ ವಾಪಸ್ ಬಂದಿವೆ ಎಂದರು.

ಈ ಪ್ರಕರಣದಲ್ಲಿ ನಾವು 365 ಕೋಟಿ ಹಣವನ್ನು ನ್ಯಾಯಾಲಯಕ್ಕೆ ಠೇವಣಿ ಇಡಬೇಕಾಗಿತ್ತು. ಇನ್ನು ಮುಂದೆ ಇದಕ್ಕೆ ಕಾನೂನು ಸಚಿವರ ನೇತೃತ್ವದಲ್ಲಿ ಪ್ರತ್ಯೇಕ ತಂಡ ರಚಿಸಲಾಗುವುದು. ಮಂಗಳವಾರ ದೆಹಲಿಗೆ ಹೋಗುತ್ತಿದ್ದು, ಎಲ್ಲಾ ಸಂಸದರನ್ನು ಭೇಟಿ ಮಾಡಿ ನಮ್ಮ ರಾಜ್ಯದ ವಿಚಾರಗಳನ್ನು ಪ್ರಸ್ತಾಪಿಸುತ್ತೇನೆ. ಕೃಷ್ಣಾ ಮೇಲ್ದಂಡೆ ಯೋಜನೆ ಬಗ್ಗೆ ನಮ್ಮ ಸಚಿವ ಸಂಪುಟ ಸಭೆ ತೀರ್ಮಾನಕ್ಕೆ ಆಂಧ್ರಪ್ರದೇಶದವರು ಆಕ್ಷೇಪಣೆ ಮಾಡಿದ್ದಾರೆ. ಈ ಎಲ್ಲಾ ವಿಚಾರವಾಗಿ ನಾವು ಚರ್ಚೆ ಮಾಡುತ್ತೇವೆ ಎಂದು ತಿಳಿಸಿದರು.

ರೈತರಿಂದ ಜೋಳ ಖರೀದಿಯಲ್ಲಿ ಅವ್ಯವಹಾರ ನಡೆಯದಂತೆ ಕ್ರಮವಹಿಸಿ : ದೊರೆಬಾಬು ಆಗ್ರಹ



ಮಾನ್ವಿ,ಮಾ.12-

ತಾಲೂಕಿನಲ್ಲಿ ಜೋಳ ಖರೀದಿ ಪ್ರಕ್ರಿಯೆಗೆ ಸಂಬಂಧಿದಿದಂತೆ ಅರ್ಹ ಫಲಾನುಭವಿ ರೈತರು ನೋಂದಣಿ ಮಾಡಿಸಿರುವುದರ ಜೊತೆಗೆ ಕೆಲ ದಲ್ಲಾಳಿಗಳು ಜೋಳ ಖರೀದಿ ಕೇಂದ್ರದಲ್ಲಿ ನಕಲಿ ರೈತರ ಹೆಸರಿನಲ್ಲಿ ನೋಂದಣಿ ಮಾಡಿಕೊಂಡು ಅವ್ಯವಹಾರ ನಡೆಸುತ್ತಿರುವ ಬಗ್ಗೆ ಆರೋಪಗಳು ಕೇಳಿ ಬಂದಿದ್ದು ಇಂತಹ ಅಕ್ರಮ ದಂಧೆಗೆ ಸೂಕ್ತ ಕಡಿವಾಣ ಹಾಕಿ ಅರ್ಹ ರೈತ ಫಲಾನುಭವಿಗಳಿಂದ ಜೋಳ ಖರೀದಿಗೆ ಮುಂದಾಗಬೇಕೆಂದು ಭಾರತೀಯ ಜನತಾ ಪಾರ್ಟಿ ರೈತ ಮೋರ್ಚಾ ಜಿಲ್ಲಾಧ್ಯಕ್ಷ ದೊರೆಬಾಬು ಆಗ್ರಹಿಸಿದ್ದಾರೆ.ಭಾಜಪ ವತಿಯಿಂದ ತಹಸೀಲ್ದಾರರಿಗೆ ನೀಡಿದ ಮನವಿಯಲ್ಲಿ ಮಾನ್ವಿ ತಾಲೂಕಿನ ಜೋಳ ಖರೀದಿ ಕೇಂದ್ರದಲ್ಲಿ ಜೋಳ ಮಾರಾಟಕ್ಕಾಗಿ ನಕಲಿ ರೈತರ ಹೆಸರನಲ್ಲಿ ಜೋಳ ವ್ಯಾಪಾರಸ್ಥರು ಮತ್ತು ಮಧ್ಯವರ್ತಿಗಳು ನೊಂದಾಯಿಸಿಕೊಂಡು ಬೇರೆ ರಾಜ್ಯದಿಂದ ಜೋಳ ಖರೀದಿಸಿ ಸರ್ಕಾರಕ್ಕೆ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿದ್ದಾರೆ. ಇದರಿಂದ ನೈಜ ರೈತರು ಬೆಳೆದ ಜೋಳಕ್ಕೆ ಸರಿಯಾದ ನೋಂದಣಿ ಸಿಗದೆ ಹಲವು ರೈತರು ಸಂಕಷ್ಟ ಎದುರಿಸುತ್ತಿದ್ದಾರೆ. ಆದ ಕಾರಣ ತಾಲೂಕಾಡಳಿತ ಜೋಳ ನೋಂದಣಿ ಮತ್ತು ಖರೀದಿಯಲ್ಲಿ ಅಕ್ರಮದಲ್ಲಿ ಭಾಗಿಯಾದ ನಕಲಿ ರೈತರು ಮತ್ತು ಅಕ್ರಮಕ್ಕೆ ಸಹಾಯ ಮಾಡುತ್ತಿರುವ ಜೋಳ ನೋಂದಣಿ ಕೇಂದ್ರದ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಂಡು ನಕಲಿ ರೈತರು ಮತ್ತು ಜೋಳ ನೋಂದಣಿ ಕೇಂದ್ರದ ಅಧಿಕಾರಿಗಳ ಮೇಲೆ ಸೂಕ್ತ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದಲ್ಲಿ ರೈತರೊಂದಿಗೆ ಬೀದಿ ಗಿಳಿದು ಉಗ್ರ ಹೋರಾಟ ನಡೆಸಬೇಕಾಗುತ್ತದೆ ಎಂದು ದೊರೆಬಾಬು ಎಚ್ಚರಿಕೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ಬಿಜೆಪಿ ರೈತ ಮೋರ್ಚಾ ತಾಲೂಕ ಅಧ್ಯಕ್ಷ ರುದ್ರಗೌಡ ಮದ್ಲಾಪುರು, ಬಿಜೆಪಿ ಮಾನ್ವಿ ಮಂಡಲ ಪ್ರಧಾನಕಾರ್ಯದರ್ಶಿ ಗುರುಸಿದ್ದಪ್ಪ ಕಣ್ಣೂರು, ಮುಖಂಡರಾದ ಜೆ.ಸುಧಾಕರ, ಶಿವಲಿಂಗಯ್ಯಸ್ವಾಮಿ, ಶರಣಯ್ಯ ಸ್ವಾಮಿ ಕಾತರಕಿ, ಬಸವರಾಜ ನಕ್ಕುಂದಿ, ವಿಶ್ವನಾಥ ವಕೀಲ್, ನರಸಪ್ಪ ಜೂಕೂರು, ಅಮರೇಶನಾಯಕ ಜಾನೇಕಲ್, ದೊಡ್ಡಪ್ಪ ಹೂಗಾರ, ಕುಮಾರಸ್ವಾಮಿ ಮೇದಾ, ರವಿ ಕುಮಾರ, ಉಮಾಪತಿನಾಯಕ, ಗೋ ಪಾಲ ಇಭ್ರಾಹಂಪುರು ಸೇರಿದಂತೆ ಅನೇಕರಿದ್ದರು.

ನೇತಾಜಿ 10ನೇ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ. ಕಠಿಣ ವಿದ್ಯಾಭ್ಯಾಸದಿಂದ ಉಜ್ವಲ ಭವಿಷ್ಯ ನಿಮ್ಮದಾಗುತ್ತದೆ : ಕೆ.ವಿಜಯ ಲಕ್ಷ್ಮಿ.



ಮಾನ್ವಿ,ಮಾ.12-

ಪರೀಕ್ಷೆ, ಬದುಕು ಎರಡೂ ಬಲಿದಾನ ಬೇಡುತ್ತವೆ, ಆ ಬಲಿದಾನವೇ ಕಠಿಣ ವಿದ್ಯಾಭ್ಯಾಸ ಹಾಗೂ ಸತತ ಪ್ರಯತ್ನ, ನಿರಂತರ ಪ್ರಯತ್ನ ಮಾಡಿ ಯಶಸ್ಸು ನಿಮ್ಮದಾಗುತ್ತದೆ ಎಂದು ನೇತಾಜಿ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಕೆ.ವಿಜಯಲಕ್ಷ್ಮಿ ಅವರು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಪಟ್ಟಣದ ನೇತಾಜಿ ಶಿಕ್ಷಣ ಸಂಸ್ಥೆಯಲ್ಲಿ ಹಮ್ಮಿಕೊಂಡಿದ್ದ ಹತ್ತನೇ ತರಗತಿಯ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭ ಉಧ್ಘಾಟಿಸಿಮಾತನಾಡಿದರು.

ತಂದೆ ತಾಯಿ ಗುರು ಹಿರಿಯರನ್ನು ಪ್ರೀತಿಸಿ, ಗೌರವದಿಂದ ಕಾಣಿ. ತಂದೆ ತಾಯಿಯ ಆಶೀರ್ವಾದ ಇದ್ದರೆ ಏನಾದರೂ ಸಾಧಿಸಲು ಸಾಧ್ಯ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕೆ.ರವಿವರ್ಮಾ, ಕೆ.ವಿನಯಾ, ಅನೀಸ್ ಫಾತಿಮಾ, ಬಸವರಾಜ, ರಹಿಂ ಪಾಷಾ, ಆರೀಫ್, ಅರುಣ, ಹನುಮಂತ, ರಿಹಾನಾ, ಆಫಿಯಾ ಶಿಕ್ಷಕರು ಮಾತನಾಡಿದರು. ವಿದ್ಯಾರ್ಥಿಗಳು ತಮ್ಮ ಅನಿಸಿಕೆಗಳನ್ನು ವ್ಯಕ್ತಪಡಿಸಿದರು.ಹತ್ತನೇ ತರಗತಿಯ ವಿದ್ಯಾರ್ಥಿ ಗಳು ಸಂಸ್ಥೆಗೆ ಟಿ.ವಿ. ಯನ್ನು ಕಾಣಿಕೆಯಾಗಿ ನೀಡಿದರು.

ಈ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿದ ಕೆ.ಈ.ನರಸಿಂಹ ಅವರು ನೇತಾಜಿ ಶಿಕ್ಷಣ ಸಂಸ್ಥೆಯಲ್ಲಿ ಕಲಿಕೆಯ ಜೊತೆಗೆ ಸಂಸ್ಕಾರ ಕಲಿಸಲಾಗುತ್ತದೆ. ವಿದ್ಯಾರ್ಥಿಗಳು ಜೀವನದ ಸವಾಲು ಹೇಗೆ ಮೆಟ್ಟಿ ನಿಲ್ಲಬೇಕು ಎನ್ನುವ ಮನೋಭಾವ ನಮ್ಮಲ್ಲಿ ಕಲಿಯುತ್ತಾರೆ ಎಂದು ಹೇಳಿದರು.ನಂತರ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು.

ಹಂಸಲೇಖ ಅವರ ಸಂಗೀತ ಸಾಧನೆಗೆ ಶೈಕ್ಷಣಿಕ ಗೌರವ: ಈಶ್ವರ್ ರವರಿಗೆ ಪಿಎಚ್.ಡಿ ಪದವಿ ಘೋಷಣೆ

ಸಿರಿಗೇರಿ: ಮಾ.12-

ಬಳ್ಳಾರಿ ಜಿಲ್ಲೆಯ ಸಿರುಗುಪ್ಪ ತಾಲೂಕಿನ ಸಿರಿಗೇರಿ ಗ್ರಾಮದ ನಿವಾಸಿ, ಹಾಲಿ ಬೆಂಗಳೂರು ವಿಶ್ವವಿದ್ಯಾಲಯ ಸಂವಹನ ವಿಭಾಗದ ಸಂಶೋಧನಾರ್ಥಿ ಈಶ್ವರ್ ರವರಿಗೆ ಪಿಎಚ್.ಡಿ ಪದವಿ ಘೋಷಿಸಿದೆ.

ಬೆಂಗಳೂರು ವಿಶ್ವವಿದ್ಯಾಲಯ ಸಂವಹನ ವಿಭಾಗದ ಹಿರಿಯ ಪ್ರಾಧ್ಯಾಪಕರು ಹಾಗೂ ಪ್ರಸ್ತುತ ಬೆಂಗಳೂರು ಉತ್ತರ ವಿಶ್ವವಿದ್ಯಾಲಯ (ಕೋಲಾರ) ಕುಲಪತಿಗಳಾದ ಪ್ರೊ. ಬಿ.ಕೆ. ರವಿ ಅವರ ಮಾರ್ಗದರ್ಶನದಲ್ಲಿ ವಿವಿಗೆ ಮಂಡಿಸಿದ ''ಕನ್ನಡ ಚಿತ್ರರಂಗಕ್ಕೆ ಹಂಸಲೇಖ ರವರ ಕೊಡುಗೆ: ಒಂದು ಅಧ್ಯಯನ'' ಎಂಬ ಸಂಶೋಧನಾ ಮಹಾಪ್ರಬಂಧಕ್ಕೆ ಡಾಕ್ಟರೇಟ್ ಪದವಿ ಘೋಷಿಸಲಾಗಿದೆ ಎಂದು ಬೆಂಗಳೂರು ವಿಶ್ವವಿದ್ಯಾಲಯ ಪ್ರಕಟಿಸಿದೆ ಮಾತ್ರವಲ್ಲ (ಮೌಲ್ಯ ಮಾಪನ) ವಿಭಾಗದ ಕುಲಸಚಿವ ಪ್ರೊ. ಚಂದ್ರಶೇಖರ ಎಸ್. ಕರಿಗಾರ ಅವರು ಡಾಕ್ಟರೇಟ್ ಘೋಷಣೆಯ ಅಧಿಸೂಚನೆ ಪತ್ರವನ್ನು ಡಾ. ಈಶ್ವರ್ ರವರಿಗೆ ನೀಡಿ ಅಭಿನಂದಿಸಿದರು.

ಈ ಹಿನ್ನೆಲೆಯಲ್ಲಿ ಡಾ. ಈಶ್ವರ್ ಅವರು ಸಿರಿಗೇರಿ ಗ್ರಾಮದ ದಿವಂಗತ ಛಲವಾದಿ ತಿಪ್ಪಣ್ಣ, ಛಲವಾದಿ ಹುಲಿಗೇಮ್ಮ ದಂಪತಿಯ ಹಿರಿಯ ಪುತ್ರ. ಕೊರೋನಾ ಸಂದರ್ಭದಲ್ಲಿ ಕೆಲವೇ ತಿಂಗಳುಗಳ ಅವಧಿಯಲ್ಲಿ ಅಪ್ಪ ಅಮ್ಮ ಸಾವನ್ನಪ್ಪಿದರೂ ಧೃತಿಗೆಡದೆ ಅಧ್ಯಯನ ಮುಂದುವರೆಸಿ ಡಾಕ್ಟರೇಟ್ ಪದವಿಯನ್ನು ಪಡೆದಿರುವುದು ವಿಶೇಷ. ಈ ಮೂಲಕ ಸಂಶೋಧನೆ ಮಾಡುವ ಯುವಕರಿಗೆ ಪ್ರೇರಣೆಯಾಗಿದ್ದಾರೆ.

ಬೆಂಗಳೂರು ವಿಶ್ವವಿದ್ಯಾಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದಲ್ಲಿ ಸ್ನಾತಕೋತ್ತರ ಪದವಿಯಲ್ಲಿ ವಿಶ್ವವಿದ್ಯಾಲಯಕ್ಕೆ 5ನೇ ರ್ಯಾಂಕ್ ನೊಂದಿಗೆ ಉತ್ತೀರ್ಣರಾಗಿದ್ದಾರೆ. ಬಳಿಕ ಇದೇ ವಿಭಾಗದಲ್ಲಿ ಸಂಶೋಧನೆಯನ್ನು ಮುಂದುವರೆಸಿದರು. ಇದೇ ಸಂದರ್ಭದಲ್ಲಿ ರಾಜ್ಯದ ವಿವಿಧ ಪ್ರತಿಷ್ಠಿತ ದಿನಪತ್ರಿಕೆಗಳಲ್ಲಿ ಹಾಗೂ ಡಿಜಿಟಲ್ ಮಾಧ್ಯಮಗಳಲ್ಲಿ ಸೇವೆ ಸಲ್ಲಿಸಿ ವೃತ್ತಿಪರ ಅನುಭವ ಹೊಂದಿದ್ದಾರೆ.


ಅಭಿನಂದನೆ: ಡಾ. ಈಶ್ವರ್ ಅವರ ಶೈಕ್ಷಣಿಕ ಸಾಧನೆಗಾಗಿ ಕುಟುಂಬಸ್ಥರು, ಗುರು-ಹಿರಿಯರು, ಸ್ನೇಹಿತರು ಹಾಗೂ ಸಿರಿಗೇರಿ ಮತ್ತು ಸುತ್ತಮುತ್ತಲಿನ ಗ್ರಾಮಸ್ಥರು ಶುಭ ಕೋರಿದ್ದಾರೆ. ಇನ್ನು ಗುಲ್ಬರ್ಗಾ ವಿವಿ ಮಾಜಿ ಸೆನೆಟ್ ಸದಸ್ಯ, ಹಿರಿಯ ಪತ್ರಕರ್ತ ಸಿ. ಮಂಜುನಾಥ, ಮಂಡ್ಯ ಅನನ್ಯ ಮಾಧ್ಯಮ ತರಬೇತಿ ಕೇಂದ್ರದ ಮುಖ್ಯಸ್ಥ ರಾಜೇಶ್ ರಾಂಪುರ ಡಾ. ಈಶ್ವರ್ ಅವರಿಗೆ ಅಭಿನಂದನೆ ಸಲ್ಲಿಸಿದ್ದಾರೆ.

ಮಹಿಳಾ ದಿನಾಚರಣೆ ಪ.ಪಂ ಮಹಿಳಾ. ಸಿಬ್ಬಂದಿ, ಪೌರಕಾರ್ಮಿಕರಿಗೆ ಅಧ್ಯಕ್ಷ ಹಾಜಿಚೌದ್ರಿಯಿಂದ ಸನ್ಮಾನ

ಸಿರವಾರ,ಮಾ.12-

ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ಪಟ್ಟಣ ಪಂಚಾಯತ್ ಕಾರ್ಯಾಲಯದಲ್ಲಿ ಪ.ಪಂಚಾಯತಿ ಅದ್ಯಕ್ಷ ಹಾಜಿಚೌದ್ರಿಯವರು ಪಂಚಾಯತಿಯಲ್ಲಿ ಸೇವೆ ಸಲ್ಲಿಸುತ್ತಿರುವ ಮಹಿಳಾ ಸಿಬ್ಬಂದಿ ವರ್ಗದವರಿಗೆ ಹಾಗೂ ಪಟ್ಟಣವನ್ನು ಸ್ವಚ್ಛಗೊಳಿಸುವ ಕಾಯಕದಲ್ಲಿ ತೊಡಗಿರುವ ಮಹಿಳಾ ಪೌರಕಾರ್ಮಿಕರನ್ನು ಶಾಲು ಹೊದಿಸಿ ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಉಪಾಧ್ಯಕ್ಷೆ ಲಕ್ಷ್ಮಿ ಆದೆಪ್ಪ, ಸಮುದಾಯ ಸಂಘಟನಾಧಿಕಾರಿ ಹಂಪಯ್ಯ ಪಾಟೀಲ್, ಕಿರಿಯ ಆರೋಗ್ಯ ನಿರೀಕ್ಷಕರು ಸುನೀತಾ ಸಜ್ಜನ್ ಸೇರಿದಂತೆ ಸಿಬ್ಬಂದಿ ವರ್ಗದವರು ಇದ್ದರು.

ಯುದ್ಧದ ಭೀತಿಯಲ್ಲಿ ದಿಢೀರ್ ಕರಗಿದ ಷೇರುದಾರರ 8.7 ಲಕ್ಷ ಕೋಟಿ ಎಲ್ಲಿಗೆ ಹೋಯಿತು?



ಷೇರುಪೇಟೆಯನ್ನು ದೇಶದ ಆರ್ಥಿಕತೆಯ ನಾಡಿಮಿಡಿತವನ್ನು ಅಳೆಯುವ ಮಾಪಕ ಎನ್ನಲಾಗುತ್ತದೆ. ಆದರೆ, ಇದು ನಮ್ಮ ಆರ್ಥಿಕತೆಯ ಸಂಪೂರ್ಣ ಚಿತ್ರಣವನ್ನು ಕಟ್ಟಿಕೊಡುವುದಿಲ್ಲ. ಷೇರುಪೇಟೆಯು ಮುಖ್ಯವಾಗಿ ಸಂಘಟಿತ ವಲಯದ ಕಾರ್ಪೊರೇಟ್ ಕಂಪನಿಗಳ ಭವಿಷ್ಯದ ಗಳಿಕೆಯ ನಿರೀಕ್ಷೆಗಳನ್ನು ಮಾತ್ರ ಆಧರಿಸಿರುತ್ತದೆ

ಮಧ್ಯಪ್ರಾಚ್ಯದಲ್ಲಿ ಭುಗಿಲೆದ್ದಿರುವ ಯುದ್ಧದ ಕಾರ್ಮೋಡಗಳು ಕೇವಲ ಭೌಗೋಳಿಕ ಗಡಿಗಳಿಗೆ ಸೀಮಿತವಾಗಿರದೆ, ಜಾಗತಿಕ ಮಾರುಕಟ್ಟೆ ಸೇರಿದಂತೆ ಭಾರತದ ಷೇರುಪೇಟೆಯಲ್ಲೂ ಭಾರೀ ತಲ್ಲಣವನ್ನು ಸೃಷ್ಟಿಸಿದೆ. ಬಾಂಬೆ ಸ್ಟಾಕ್ ಎಕ್ಸ್ ಚೇಂಜ್‌ನಲ್ಲಿ ಪಟ್ಟಿ ಮಾಡಲಾದ ಕಂಪನಿಗಳ ಮಾರುಕಟ್ಟೆ ಬಂಡವಾಳೀಕರಣದಲ್ಲಿ ದಿಢೀರ್ 8.7 ಲಕ್ಷ ಕೋಟಿ ರೂಪಾಯಿಗಳಿಗೂ ಅಧಿಕ ಬೃಹತ್ ನಷ್ಟ ಸಂಭವಿಸಿದ್ದು, ಹೂಡಿಕೆದಾರರ ಎದೆಯಲ್ಲಿ ನಡುಕ ಹುಟ್ಟಿಸಿದೆ. ಕಣ್ಣೆದುರೇ ಇಷ್ಟೊಂದು ಭಾರಿ ಮೊತ್ತ ಕರಗಿ ಹೋದಾಗ, ಈ ಹಣ ಎಲ್ಲಿಗೆ ಹೋಯಿತು ಮತ್ತು ಇದು ದೇಶದ ಆರ್ಥಿಕತೆಗೆ ಬೀಳುವ ನೈಜ ಪೆಟ್ಟೇ ಎಂಬ ಪ್ರಶ್ನೆಗಳು ಹುಟ್ಟಿಕೊಳ್ಳುವುದು ಸಹಜ.

ಷೇರುಪೇಟೆಯಲ್ಲಿನ ದಿನನಿತ್ಯದ ಏರಿಳಿತಗಳಿಂದ ಆಗುವ ನಷ್ಟ ಅಥವಾ ಲಾಭವನ್ನು ಪ್ರಾಥಮಿಕವಾಗಿ ಕಾಗದದ ಮೇಲಿನ ಲೆಕ್ಕಾಚಾರ ಎಂದು ಕರೆಯಲಾಗುತ್ತದೆ. ಅಂದರೆ, ನೀವು ಖರೀದಿಸಿದ ಷೇರಿನ ಬೆಲೆ ದಿಢೀರ್ ಕುಸಿದಾಗ, ನೀವು ಅದನ್ನು ವಾಸ್ತವಿಕವಾಗಿ ನಷ್ಟಕ್ಕೆ ಮಾರಾಟ ಮಾಡದ ಹೊರತು ಆ ನಷ್ಟ ನೈಜವಾಗುವುದಿಲ್ಲ; ಅದು ಕೇವಲ ಲೆಕ್ಕದ ಪುಸ್ತಕದಲ್ಲಿ ಹಾಗೂ ಪರದೆಯ ಮೇಲೆ ಮಾತ್ರ ಮೌಲ್ಯ ಕಳೆದುಕೊಂಡಿರುತ್ತದೆ. ಅಂದರೆ, ಭಾರತೀಯ ಕಂಪನಿಗಳ ಮೌಲ್ಯಮಾಪನ ಅಷ್ಟರಮಟ್ಟಿಗೆ ತಗ್ಗಿದೆ ಎಂದೇ ಅರ್ಥ. ಇದು ಕೇವಲ ಕಾಗದಕ್ಕೆ ಸೀಮಿತವಾದರೂ, ಮುಂದಿನ ದಿನಗಳಲ್ಲಿ ಕಂಪನಿಗಳ ಬಂಡವಾಳ ಕ್ರೋಢೀಕರಣ, ಸಾಲ ಪಡೆಯುವ ಸಾಮರ್ಥ್ಯ ಹಾಗೂ ಹೂಡಿಕೆದಾರರ ಕೊಳ್ಳುವ ಶಕ್ತಿ ಮೇಲೆ ಇದು ಬಹುದೊಡ್ಡ ಮಟ್ಟದ ನೈಜ ಪರಿಣಾಮವನ್ನು ಬೀರುತ್ತದೆ.

ಇತ್ತೀಚಿನ ವರ್ಷಗಳಲ್ಲಿ ಭಾರತೀಯ ಷೇರುಪೇಟೆಯಲ್ಲಿ ಡಿಜಿಟಲೀಕರಣದ ಪ್ರಭಾವದಿಂದಾಗಿ ಸಾಮಾನ್ಯ ಜನರ ಪಾಲ್ಗೊಳ್ಳುವಿಕೆ ಗಣನೀಯವಾಗಿ ಹೆಚ್ಚಾಗಿದೆ. ಪ್ರಸ್ತುತ ಭಾರತದಲ್ಲಿ ಡಿಮ್ಯಾಟ್ ಖಾತೆಗಳ ಸಂಖ್ಯೆ 15 ಕೋಟಿ ಗಡಿ ದಾಟಿದ್ದು, ಇವರನ್ನು ಚಿಲ್ಲರೆ ಹೂಡಿಕೆದಾರರು ಎಂದು ಕರೆಯಲಾಗುತ್ತದೆ.

ಸಂಖ್ಯೆಯಲ್ಲಿ ಇವರು ಸಾಗರದಷ್ಟಿದ್ದರೂ, ಮಾರುಕಟ್ಟೆಯ ದಿಕ್ಕನ್ನು ಕ್ಷಣಾರ್ಧದಲ್ಲಿ ಬದಲಿಸುವ ಶಕ್ತಿ ಇರುವುದು ವಿದೇಶಿ ಮತ್ತು ದೇಶೀಯ ಸಾಂಸ್ಥಿಕ ಹೂಡಿಕೆದಾರರ ಕೈಯಲ್ಲಿ. ಈ ಸಾಂಸ್ಥಿಕ ಹೂಡಿಕೆದಾರರ ಸಂಖ್ಯೆ ಬೆರಳಣಿಕೆಯಷ್ಟಿದ್ದರೂ, ಅವರೂ ಮಾರುಕಟ್ಟೆಗೆ ಸುರಿಯುವ ಬಂಡವಾಳ ಲಕ್ಷಾಂತರ ಕೋಟಿ ರೂಪಾಯಿಗಳಷ್ಟಿರುತ್ತದೆ. ಹೀಗಾಗಿ, ಮಾರುಕಟ್ಟೆಯಲ್ಲಿ ಸಂಭವಿಸುವ ಬಹುತೇಕ ಏರುಪೇರುಗಳು ಇವರ ಚಲನವಲನಗಳನ್ನು ಅವಲಂಬಿಸಿರುತ್ತದೆ.

ಮಾರುಕಟ್ಟೆಯಲ್ಲಿ ದಿಢೀರ್ ಮತ್ತು ತೀವ್ರತರವಾದ ಕುಸಿತ ಕಂಡುಬಂದು, ಬಹುಪಾಲು ಷೇರುಗಳು ನಷ್ಟದ ಕೆಂಪು ಬಣ್ಣದಲ್ಲಿ ಮುಳುಗಿದಾಗ ಅದನ್ನು ಪೇಟೆಯ ಭಾಷೆಯಲ್ಲಿ ರಕ್ತಪಾತ ಎಂದು ಕರೆಯಲಾಗುತ್ತದೆ. ಅದೇ ರೀತಿ, ಷೇರುಗಳ ಬೆಲೆ ನಿರಂತರವಾಗಿ ಕುಸಿಯುವ ಹಾಗೂ ಹೂಡಿಕೆದಾರರಲ್ಲಿ ಭೀತಿ ತುಂಬಿ ತುಂಬಿರುವ ನಿರಾಶಾದಾಯಕ ಸ್ಥಿತಿಯನ್ನು ಕರಡಿ ಕುಣಿತ ಪ್ರತಿನಿಧಿಸುತ್ತದೆ.

ಕರಡಿಯು ತನ್ನ ಪಂಜದಿಂದ (ಕಾಲು ಅಥವಾ ಕೈಯಂತಹ ಭಾಗ) ಕೆಳಮುಖವಾಗಿ ದಾಳಿ ಮಾಡುವ ಕಾರಣ ಈ ಹೆಸರು ರೂಢಿಯಲ್ಲಿದೆ. ಇದಕ್ಕೆ ತದ್ವಿರುದ್ಧವಾಗಿ, ಮಾರುಕಟ್ಟೆ ಏರುಮುಖವಾಗಿ ಸಾಗುತ್ತಿರುವಾಗ ಮತ್ತು ಆರ್ಥಿಕತೆಯ ಬಗ್ಗೆ ಅಪಾರ ಆಶಾವಾದವಿರುವಾಗ, ತನ್ನ ಕೊಂಬುಗಳಿಂದ ಮೇಲಕ್ಕೆ ಚಿಮ್ಮಿಸುವ ಸ್ವಭಾವದ ಗೂಳಿಗೆ ಹೋಲಿಸಿ ಗೂಳಿ ನಲಿವು ಎಂದು ಬಣ್ಣಿಸಲಾಗುತ್ತದೆ.

ಷೇರುಪೇಟೆಯನ್ನು ದೇಶದ ಆರ್ಥಿಕತೆಯ ನಾಡಿಮಿಡಿತವನ್ನು ಅಳೆಯುವ ಮಾಪಕ ಎನ್ನಲಾಗುತ್ತದೆ. ಆದರೆ, ಇದು ನಮ್ಮ ಆರ್ಥಿಕತೆಯ ಸಂಪೂರ್ಣ ಚಿತ್ರಣವನ್ನು ಕಟ್ಟಿಕೊಡುವುದಿಲ್ಲ. ಷೇರುಪೇಟೆಯು ಮುಖ್ಯವಾಗಿ ಸಂಘಟಿತ ವಲಯದ ಕಾರ್ಪೊರೇಟ್ ಕಂಪನಿಗಳ ಭವಿಷ್ಯದ ಗಳಿಕೆಯ ನಿರೀಕ್ಷೆಗಳನ್ನು ಮಾತ್ರ ಆಧರಿಸಿರುತ್ತದೆ.

ಭಾರತದಂತಹ ದೇಶದಲ್ಲಿ ಬೃಹತ್ ಪ್ರಮಾಣದಲ್ಲಿರುವ ಅಸಂಘಟಿತ ವಲಯ, ಸಣ್ಣ ವ್ಯಾಪಾರಗಳು ಮತ್ತು ಕೃಷಿಯ ಪಾಲು ಷೇರುಪೇಟೆಯಲ್ಲಿ ನೇರವಾಗಿ ಪ್ರತಿಫಲಿಸುವುದಿಲ್ಲ. ಆದಾಗ್ಯೂ, ಮಧ್ಯಪ್ರಾಚ್ಯದಂತಹ ಬಿಕ್ಕಟ್ಟುಗಳಿಂದ ಕಚ್ಚಾತೈಲದ ಬೆಲೆ ಏರಿಕೆಯಾದರೆ ಅದು ಭಾರತದ ಹಣದುಬ್ಬರವನ್ನು ಹೆಚ್ಚಿಸುತ್ತದೆ ಮತ್ತು ಕಂಪನಿಗಳ ಲಾಭಾಂಶವನ್ನು ಕಡಿತಗೊಳಿಸುತ್ತದೆ. ಇದರ ಸುಳಿವನ್ನು ಅರಿತೇ ಷೇರುಪೇಟೆ ಮೊದಲೇ ಕುಸಿಯುತ್ತದೆ. ಈ ಅರ್ಥದಲ್ಲಿ, ಷೇರು ಮಾರುಕಟ್ಟೆಯು ಮುಂಬರುವ ಆರ್ಥಿಕ ಸಂಕಷ್ಟಗಳ ಮುನ್ಸೂಚನೆ ನೀಡುವ ಕನ್ನಡಿಯಾಗಿ ಅತ್ಯಂತ ನಿಖರವಾಗಿ ಕಾರ್ಯನಿರ್ವಹಿಸುತ್ತದೆ.

ಎಸ್‌ಎಸ್‌ಎಲ್ ಸಿ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಕಾರ್ಯಕ್ರಮ ಮೋಟಿವೇಶನ್ ಕ್ಲಾಸ್


ಸಿಂಧನೂರು: ಮಾ.11

ಸಿಂಧನೂರು ತಾಲೂಕು ವ್ಯಾಪ್ತಿಯ ಸಿದ್ರಾಪೂರ ಗ್ರಾಮದ ಸರಕಾರಿ ಪ್ರೌಢ ಶಾಲೆ ವತಿಯಿಂದ 2025-26 ನೇ ಸಾಲಿನ ಎಸ್‌ಎಸ್‌ಎಲ್ ಸಿ ವಿದ್ಯಾರ್ಥಿಗಳಿಗೆ ಬಿಳ್ಕೊಡುಗೆ ಮತ್ತು ಸರಸ್ವತಿ ಪೂಜಾ ಕಾರ್ಯಕ್ರಮವನ್ನು ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಬೆಳಗ್ಗೆ ಎಲ್ಲಾ ಶಿಕ್ಷಕರು ವಿದ್ಯಾರ್ಥಿಗಳು ಸೇರಿ ಸರಸ್ವತಿ ಪೂಜಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕೇಶವಮೂರ್ತಿ ಬಿವಿ ಶಿಕ್ಷಕರು ಇವರು ಡಿವಿಜಿ ಯವರ ಪದ್ಯದ ಸಾಲುಗಳನ್ನು ಹೇಳುವುದರ ಮೂಲಕ ಕಾರ್ಯಕ್ರಮದ ನಿರೂಪಣೆಯನ್ನು ಮಾಡಿದರು.ಪ್ರಸ್ತಾವಿಕ ನುಡಿಯನ್ನು ಮಂಜುನಾಥ ಹೆಡಗಿನಾಳ ನುಡಿದರು ಅಧ್ಯಕ್ಷತೆಯನ್ನು ಪ್ರಭಾರಿ ಮುಖ್ಯ ಗುರುಗಳಾದ ಶ್ರೀ ವಿರೂಪಣ್ಣ ವಹಿಸಿದ್ದರು.

10ನೇ ತರಗತಿ ಮೋಟಿವೇಶನ್ ಕ್ಲಾಸನ್ನು ನಿವೃತ್ತ ಶಿಕ್ಷಕ ವೆಂಕನಗೌಡ ವಟಗಲ್ ಅವರು ಎಸ್‌ಎಸ್‌ಎಲ್ ಸಿ ವಿದ್ಯಾರ್ಥಿಗಳಿಗೆ ಪರೀಕ್ಷೆಯನ್ನು ಪಾಸ್ ಮಾಡುವ ವಿಧಾನ ತಿಳಿಸಿದರು.

ಉತ್ತಮ ವಿದ್ಯಾರ್ಥಿ ಆಯ್ಕೆ: 2025 26ನೇ ಸಾಲಿನ 8,9,10 ನೇ ತರಗತಿಯ ವಿದ್ಯಾರ್ಥಿಗಳಿಗೆ ಶಿಸ್ತು, ವಿನಯತೆ, ಪಠ್ಯ, ಸಹಪಠ್ಯ, ಕ್ರೀಡೆ, ಮಾನದಂಡದ ಆಧಾರದ ಮೇಲೆ ಈ ವರ್ಷದ ಉತ್ತಮ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಯಿತು. 8ನೇ ತರಗತಿಯಲ್ಲಿ ಶರಣಬಸವ ತಂದೆ ಈರಪ್ಪ 9ನೇ ತರಗತಿಯಲ್ಲಿ ಕಾವೇರಿ ತಂದೆ ಶಿವನಗೌಡ 10ನೇ ತರಗತಿಯಲ್ಲಿ ಸಿಂಧು ತಂದೆ ಕರೇಗೌಡ ವಿದ್ಯಾರ್ಥಿಗಳು ಉತ್ತಮ ವಿದ್ಯಾರ್ಥಿ ಪ್ರಶಸ್ತಿಯನ್ನು ಪಡೆದರು.



ಬಹುಮಾನ ವಿತರಣೆ: 2024-25 ನೇ ಸಾಲಿನಲ್ಲಿ ಎಸ್‌ಎಸ್‌ಎಲ್ಸಿ ಪರೀಕ್ಷೆಯಲ್ಲಿ ಶಾಲೆಗೆ ಹೆಚ್ಚು ಅಂಕ ಪಡೆದ ಯಂಕಮ್ಮ ತಂದೆ ಹನುಮನಗೌಡ ವಿದ್ಯಾರ್ಥಿನಿಗೆ ಶಾಲೆಯ ಕಡೆಯಿಂದ ಬಹುಮಾನ ನೀಡಿ ಸನ್ಮಾನ ಮಾಡಲಾಯಿತು. ವಿಷಯವಾರು ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಆಯಾ ವಿಷಯ ಶಿಕ್ಷಕರು ಬಹುಮಾನ ನೀಡಿದರು. ಕನ್ನಡ, ಗಣಿತ ಮತ್ತು ಸಮಾಜ ವಿಜ್ಞಾನ ವಿಷಯಗಳಲ್ಲಿ ಅತಿ ಹೆಚ್ಚಿನ ಅಂಕ ಪಡೆದ ಯಂಕಮ್ಮ ಹನುಮನಗೌಡ ಇಂಗ್ಲಿಷ್ ವಿಷಯದಲ್ಲಿ ಹೆಚ್ಚು ಅಂಕ ಗಳಿಸಿದ ನಾಗರತ್ನ ಅಮರೇಶ ಹಿಂದಿ, ವಿಜ್ಞಾನ ವಿಷಯದಲ್ಲಿ ಹೆಚ್ಚು ಅಂಕ ಗಳಿಸಿದ ವಿಕ್ರಮ್ ಶ್ರೇಷ್ಠಿ. ಬಹುಮಾನಗಳನ್ನು ಪಡೆದುಕೊಂಡರು.

ಸನ್ಮಾನ: 2025 26 ನೇ ಸಾಲಿನಲ್ಲಿ ಶಾಲೆಯಲ್ಲಿ ಅತಿಥಿ ಶಿಕ್ಷಕರಾಗಿ ಸೇವೆ ಸಲ್ಲಿಸಿದ ಶ್ರೀ ಹನುಮೇಶ್ ಹಾಗೂ ಕುಮಾರಿ ಶಿಲ್ಪ ಇವರಿಗೆ ಶಾಲೆಯ ವತಿಯಿಂದ ಸನ್ಮಾನ, ನೆನಪಿನ ಕಾಣಿಕೆಯನ್ನು ನೀಡಿದರು. ಉತ್ತಮ ಶಿಕ್ಷಣ ಸಾರಥಿ ಪ್ರಶಸ್ತಿ ಪಡೆದ ಶ್ರೀಮತಿ ಶರಣಮ್ಮ ಕನ್ನಡ ಪಂಡಿತರು ಇವರಿಗೆ ಶಾಲಾ ವತಿಯಿಂದ ಸನ್ಮಾನಿಸಿದರು.

ಸ್ವಾಗತವನ್ನು 9ನೇ ತರಗತಿ ವಿದ್ಯಾರ್ಥಿನಿ ಅನ್ನಪೂರ್ಣ ಮಾಡಿದರು. ಕೊನೆಯಲ್ಲಿ ಮಹೇಶ್ ಹಿಂದಿ ಶಿಕ್ಷಕರು ವಂದನಾರ್ಪಣೆಯನ್ನು ನೆರವೇರಿಸಿದರು. ತದನಂತರದ ಎಲ್ಲಾ ವಿದ್ಯಾರ್ಥಿಗಳು ಹೋಳಿಗೆ ಊಟದ ರುಚಿ ಸವಿದರು. ಊಟದ ತರುವಾಯ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಪ್ರಾರಂಭಿಸಲಾಯಿತು. ಶಾಲೆಯ ವಿದ್ಯಾರ್ಥಿಗಳೆಲ್ಲ ಹಾಡು, ನೃತ್ಯ ಮತ್ತು ಕಿರು ನಾಟಕಗಳ ಮೂಲಕ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದವರನ್ನು ರಂಜಿಸಿದರು.

ಇದೇ ವೇಳೆಯಲ್ಲಿ ಮುಖ್ಯ ಗುರುಗಳಾದ ವಿರುಪಣ್ಣರವರು, ವೆಂಕನಗೌಡ ವಟಗಲ್ ಹಿರಿಯ ಶಿಕ್ಷಕ ಸೋಮಲಿಂಗಪ್ಪ, ದೈಹಿಕ ಶಿಕ್ಷಣ ಶಿಕ್ಷಕ ಹಾಗೂ ಯೋಜನಾ ನಿರ್ವಾಹಕ ಮಂಜುನಾಥ ಹೆಡಗಿನಾಳ, ಶಿಕ್ಷಕ ಕೇಶವಮೂರ್ತಿ ಬಿ.ವಿ, ಶಿಕ್ಷಕಿ ಶ್ರೀಮತಿ ಶರಣಮ್ಮ, ಶಿಕ್ಷಕ ಮಹೇಶ್ ಶಿಕ್ಷಕಿ ಶಿಲ್ಪ, ಶಿಕ್ಷಕ ಹನುಮೇಶ, ವಿದ್ಯಾರ್ಥಿಗಳು, ಮತ್ತಿತರರು ಉಪಸ್ಥಿತರಿದ್ದರು.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR